ಸಂಪುಟ: 01 VOLUVE 01 | ಸಂಚಿಕೆ: 52 ISSUE: 52 | ಪುಟ: 06 PAGE: 06 | ಗುರುವಾರ 03-09-2026 THURSDAY 03-09-2026 | VD | REG-PRGI NO KNKAN/26/A5239 ಮೋ: 9880010077 vkbharath25@gmail.com

# ವಿಜಯ ದುಂಬಿ

VIJAYA DUMBI KANNADA DAILY ವಿಶ್ವಾಸದ ಕನ್ನಡಿ ಕನ್ನಡ ದಿನಪತ್ರಿಕೆ Rs.3/-

2 ನೇರಳೆಕೆರೆಯಲ್ಲಿ ಯಶಸ್ವಿಯಾಗಿ ಜರುಗಿದ ಪಶು ಆರೋಗ್ಯ ತಪಾಸಣಾ ಶಿಬಿರ

4 ನೀಟ್ ಪ್ರತಿಭಟನಾಕಾರರ ವಿರುದ್ಧದ ಎಫ್ಐಆರ್ ರದ್ದು, ಸೆ. 5ರ ಪ್ರತಿಭಟನೆ ಹಿಂಪಡೆದ CJP

6 ನಡುರಸ್ತೆಯಲ್ಲೇ ಯರ್ಾಪಿಡೋ ಬೈಕ್ ಸವಾರನ ಮೇಲೆ ಆಟೋ ಚಾಲಕರಿಂದ ಹಲ್ಲೆ

## ಗಜಪಡೆಗೆ ಸಿಸಿಟಿವಿ ಕಣ್ಗಾವಲು: ದಸರಾ ಆನೆಗಳ ರಕ್ಷಣೆಗೆ ಬಿಗಿ ಭದ್ರತೆ

ವಿಜಯ ದುಂಬಿ ಸುದ್ದಿ....

ಮೈಸೂರು: ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಭಾಗವಹಿಸಲು ಆಗಮಿಸಿರುವ ಗಜಪಡೆಯ ವಾಸ್ತವ್ಯಕ್ಕೆ ಅರಮನೆ ಆವರಣದಲ್ಲಿ ಬಿಗಿ ಭದ್ರತೆ ಕಲ್ಪಿಸಲಾಗಿದ್ದು, ಆನೆಗಳು ಇರುವ ಶೆಡ್‌ಗಳಿಗೆ ಸಿಸಿಟಿವಿ ಅಳವಡಿಸಲಾಗಿದೆ. ಆ.28 ರಂದು ಜಯಮಾರ್ತಾಂಡ ದ್ವಾರದ ಮೂಲಕ ಅರಮನೆ ಪ್ರವೇಶ ಮಾಡಿರುವ ಒಂಬತ್ತು ಆನೆಗಳ ವಾಸ್ತವ್ಯಕ್ಕೆ ಅರಮನೆ ಮುಂಭಾಗದ ಕೋಡಿ ಸೋಮೇಶ್ವರ ದೇವಾಲಯ ಹಾಗೂ ಭುವನೇಶ್ವರಿ ದೇವಾಲಯದ ಆವರಣದ ಶೆಡ್‌ನಲ್ಲಿ ವ್ಯವಸ್ಥೆ ಮಾಡಲಾಗಿದೆ.



ಗಜಪಡೆಯಲ್ಲಿ ಶ್ರೀಕಂಠ, ಮಹೇಂದ್ರ, ಧನಂಜಯ, ಪ್ರಶಾಂತ, ಏಕಲವ್ಯ, ಗೋಪಿ, ಶ್ರೀರಾಮ, ಕಾವೇರಿ ಮತ್ತು ಲಕ್ಷ್ಮಿ ಸೇರಿದಂತೆ ಒಂಬತ್ತು ಆನೆಗಳಿದ್ದು, ಆನೆಗಳಿರುವ ಶೆಡ್ ಹಾಗೂ ಆನೆಗಳಿಗೆ ಆಹಾರ ತಯಾರು ಮಾಡುವ ಸ್ಥಳ ಸೇರಿದಂತೆ ಒಟ್ಟು 10 ಕಡೆಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದೆ. ಈ ಸಿಸಿಟಿವಿ ಮೂಲಕ 24 ಗಂಟೆಗಳ ಕಾಲ ಆನೆಗಳ ಚಲನವಲನ ಹಾಗೂ ಆನೆಗಳ ಬಳಿ ಯಾರು ಬರುತ್ತಾರೆ, ಹೋಗುತ್ತಾರೆ ಎಂಬುದರ ಮೇಲೆ ನಿಗಾ ವಹಿಸಲಾಗುತ್ತಿದೆ. ಅಲ್ಲದೆ ಆನೆಗಳ ಫೋಟೋ, ವಿಡಿಯೋ ತೆಗೆಯದಂತೆ ನಿರ್ಬಂಧ ವಿಧಿಸಲಾಗಿದೆ. ಪೌಷ್ಟಿಕ ಆಹಾರಕ್ಕೆ ವ್ಯವಸ್ಥೆ: ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ಗಜಪಡೆಯನ್ನು ಜಂಬೂಸವಾರಿ ತಾಲೀಮಿಗೆ ಕರೆದೊಯ್ಯುವ ವೇಳೆ ಪೌಷ್ಟಿಕ ಆಹಾರ ನೀಡಲಾಗುತ್ತಿದೆ. ಈ ಸ್ಥಳದಲ್ಲೂ ಸಿಸಿಟಿವಿ ಅಳವಡಿಸಲಾಗಿದ್ದು, ಸಾರ್ವಜನಿಕರು ಆನೆಗಳಿಗೆ ಆಹಾರ ನೀಡದಂತೆ ನಿರ್ಬಂಧಿಸಲಾಗಿದೆ. ಗಜಪಡೆ ವಾಸ್ತವ್ಯದ ಸ್ಥಳದಲ್ಲಿ ಪೊಲೀಸ್, ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಗಜಪಡೆಯ ರಕ್ಷಣೆಗೆ ನಿಯೋಜಿಸಲಾದ ವಿಶೇಷ ತಂಡವು 24 ಗಂಟೆಗಳ ಕಾಲ ಸಿಸಿಟಿವಿ ಕಣ್ಗಾವಲಿನೊಂದಿಗೆ ಕಾರ್ಯ ನಿರ್ವಹಿಸಲಿದೆ.

# ಜಿಬಿಎ ಶಾಲೆಗಳಲ್ಲೂ ಬಯೋ ಮೆಟ್ರಿಕ್ ಹಾಜರಾತಿ ವ್ಯವಸ್ಥೆ ಜಾರಿಗೆ ತನ್ನಿ : ಸಚಿವ ಕೃಷ್ಣ ಬೈರೇಗೌಡ

ಚಿರಾಯು ಜ್ಞಾನಿ ಸುದ್ದಿ ಜಾಲ ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮುಖಚರ್ಯೆ ಆಧಾ-ರಿತ ಹಾಜರಾತಿ ವ್ಯವಸ್ಥೆ ಜಾರಿಗೊಳಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಬಿಎ ವ್ಯಾಪ್ತಿಯ ಅಭಿವೃದ್ಧಿ ಕಾಮಗಾರಿಗಳು ಹಾಗೂ ವಿವಿಧ ಯೋಜನೆಗಳ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಈಗಾಗಲೇ ಜಾರಿಯಲ್ಲಿರುವ ಮಾದರಿಯನ್ನು ಪಾಲಿಕೆ ಶಾಲೆಗಳಲ್ಲೂ ಅಳವಡಿಸಿಕೊಳ್ಳುವಂತೆ ಶಿಕ್ಷಣ ವಿಭಾಗದ ವಿಶೇಷ ಆಯುಕ್ತರಿಗೆ ನಿರ್ದೇಶನ ನೀಡಿದರು.

ಪಾಲಿಕೆ ಶಾಲಾ ಮಕ್ಕಳಿಗೆ ಸಮವಸ್ತ್ರಗಳನ್ನು ನಿಗದಿತ ಸಮಯದಲ್ಲಿ ವಿತರಿಸಬೇಕು. ಶಾಲಾ-ಕಾಲೇಜುಗಳ ಶೌಚಾಲಯಗಳು ಸಮರ್ಪಕವಾಗಿರಬೇಕು. ಅಗತ್ಯವಿದ್ದಲ್ಲಿ ಸಿಎಸ್‌ಆರ್ ಅನುದಾನ ಬಳಸಿ ಶೌಚಾಲಯ ನಿರ್ಮಿಸಿ, ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಜಿಬಿಎ ವ್ಯಾಪ್ತಿಯಲ್ಲಿ ಒಟ್ಟು 175 ಪಾಲಿಕೆ ಶಿಕ್ಷಣ ಸಂಸ್ಥೆಗಳಿದ್ದು, 22,210 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. 115 ಖಾಯಂ ಹಾಗೂ 841 ಅತಿಥಿ ಶಿಕ್ಷಕರು ಸೇರಿದಂತೆ 956 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ.



ವೈಟ್ ಟಾಪಿಂಗ್ ಕಾಮಗಾರಿಗೆ ವೇಗ:ನಗರದಲ್ಲಿ 1,700 ಕೋಟಿ ವೆಚ್ಚದಲ್ಲಿ 120.60 ಕಿ.ಮೀ ಉದ್ದದ 117 ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿದ್ದು, 61.43 ಕಿ.ಮೀ ಕಾಮಗಾರಿ ಪೂರ್ಣಗೊಂಡಿದೆ. ಬಾಕಿ ಇರುವ 59.26 ಕಿ.ಮೀ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಸಚಿವರು ಸೂಚಿಸಿದರು. ರಸ್ತೆ ಅಭಿವೃದ್ಧಿ ವೇಳೆ ಪಾದಚಾರಿ ಮಾರ್ಗಗಳನ್ನು ಅತಿಯಾಗಿ ಎತ್ತರಿಸದೆ, ವೀಲ್‌ಚೇರ್‌ಗಳ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ನಿರ್ಮಿಸಬೇಕು. ಮರಗಳ ಸುತ್ತ ಗ್ರಾಸ್ ಪೇವರ್ ಬ್ಲಾಕ್‌ಗಳನ್ನು ಅಳವಡಿಸಬೇಕು ಎಂದು ನಿರ್ದೇಶಿಸಿದರು.

ಅಧಿಕಾರಿಗಳಿಗೆ ತರಾಟೆ: ಹೊರವಲಯ ರಸ್ತೆಗಳ ಹೈಡೆನ್ಸಿಟಿ ಕಾರಿಡಾರ್ ಕಾಮಗಾ-ರಿಗಳಲ್ಲಿ ಪ್ರತಿ 20 ಮೀಟರ್‌ಗೆ ವಿದ್ಯುತ್ ಕಂಬ ಅಳವಡಿಸಬೇಕಿದ್ದರೂ, ಕೆಲವೆಡೆ ಹಳೆಯ ಹಾಗೂ ಹೊಸ ಕಂಬಗಳನ್ನು ಸೇರಿಸಿ 5ರಿಂದ 10 ಮೀಟರ್ ಅಂತರದಲ್ಲೇ ಕಂಬಗಳನ್ನು ಹಾಕಿರುವುದಕ್ಕೆ ಕೃಷ್ಣ ಬೈರೇಗೌಡ ಅಸಮಾಧಾನ ವ್ಯಕ್ತಪಡಿಸಿದರು. ಇದು ಸಾರ್ವಜನಿಕರ ಹಿತಕ್ಕಾಗಿ ಮಾಡುತ್ತಿರುವ ಕಾಮಗಾರಿಯೇ ಅಥವಾ ಗುತ್ತಿಗೆದಾರರಿಗೆ ಬಿಲ್ ಪಾವತಿಸುವ ಉದ್ದೇಶದಿಂದ ಮಾಡುತ್ತಿರುವ ಕಾಮಗಾರಿಯೇ? ಎಂದು ಪ್ರಶ್ನಿಸಿದ ಅವರು, ಹೊಸ ಕಂಬ ಅಳವಡಿಸುವಾಗ ಹಳೆಯ ಕಂಬಗಳನ್ನು ತೆರವುಗೊಳಿಸಿ ಏಕರೂಪದ ವಿನ್ಯಾಸದ ಕಂಬಗಳನ್ನು ಅಳವಡಿಸಬೇಕು ಎಂದರು. ಸಭೆಯಲ್ಲಿ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೇರಿದಂತೆ ವಿವಿಧ ನಗರ ಪಾಲಿಕೆಗಳ ಆಯುಕ್ತರು, ವಿಶೇಷ ಆಯುಕ್ತರು, ಎಂಜಿನಿಯರಿಂಗ್, ಆರೋಗ್ಯ, ನಗರ ಯೋಜನೆ ಹಾಗೂ ತೋಟಗಾರಿಕಾ ವಿಭಾಗದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.



# ನೇರಳೆಕೆರೆಯಲ್ಲಿ ಯಶಸ್ವಿಯಾಗಿ ಜರುಗಿದ ಪಶು ಆರೋಗ್ಯ ತಪಾಸಣಾ ಶಿಬಿರ

ವಿಜಯ ದುಂಬಿ ಸುದ್ದಿ....

**ಮಾಗಡಿ: ತಾಲ್ಲೂಕಿನ ನೇರಳೆಕೆರೆ ಗ್ರಾಮದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ (ಜಿ.ಕೆ.ವಿ.ಕೆ) ವಿದ್ಯಾರ್ಥಿಗಳ 'ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮ'ದ ಅಂಗವಾಗಿ "ಬರಡು ರಾಸುಗಳ ತಪಾಸಣೆ ಮತ್ತು ಪಶು ಆರೋಗ್ಯ ಚಿಕಿತ್ಸಾ ಶಿಬಿರ"ವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.**



ಶಿಬಿರಕ್ಕೆ ನೇರಳೆಕೆರೆ ಗ್ರಾಮದ ರೈತ-ರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, 50ಕ್ಕೂ ಹೆಚ್ಚು ರೈತರು ಭಾಗವಹಿಸಿ 100ಕ್ಕೂ ಅಧಿಕ ಜಾನುವಾರುಗಳನ್ನು ಆರೋಗ್ಯ ತಪಾಸಣೆಗೆ ಕರೆತಂದಿದ್ದರು. ರೈತರು ತಮ್ಮ ಜಾನುವಾರುಗಳ ಆರೋಗ್ಯ ಹಾಗೂ ಸಂತಾನೋತ್ಪತ್ತಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪಶುವೈದ್ಯರೊಂದಿಗೆ ಚರ್ಚಿಸಿ ಅಗತ್ಯ ಔಷಧಿ, ಸಲಹೆ ಮತ್ತು ನಿರ್ವಹಣಾ ಕ್ರಮಗಳ ಬಗ್ಗೆ ಮಾರ್ಗದರ್ಶನ ಪಡೆದುಕೊಂಡರು.

ಸಮಯಕ್ಕೆಸರಿಯಾಗಿ ಲಸಿಕೆಹಾಕಿ: ಡಾ. ನಾಗಭೂಷಣ್

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಮಾಗಡಿ ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ನಾಗಭೂಷಣ್, "ಜಾನುವಾರುಗಳ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಮುನ್ನೆಚ್ಚರಿಕಾ ಕ್ರಮಗಳು ಅತ್ಯಗತ್ಯ. ಸಮಯಕ್ಕೆ ಸರಿಯಾಗಿ ಲಸಿಕೆ ಹಾಕುವುದು, ಜಂತುಹುಳು ನಿಯಂತ್ರಣ, ಸಮತೋಲಿತ ಆಹಾರ, ಖನಿಜ ಮಿಶ್ರಣ ನೀಡುವುದು ಹಾಗೂ ಕೊಟ್ಟಿಗೆಯ ಸ್ವಚ್ಛತೆ ಕಾಪಾಡುವುದು ಮುಖ್ಯ," ಎಂದು ತಿಳಿಸಿದರು. ಜೊತೆಗೆ ಸರ್ಕಾರದಿಂದ ಲಭ್ಯವಿರುವ ಪಶುಸಂಗೋಪನೆ ತರಬೇತಿ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳುವಂತೆ ಕೋರಿದರು.



ಸಂತಾನೋತ್ಪತ್ತಿ ಸಮಸ್ಯೆ ನಿರ್ಲಕ್ಷಿಸಬೇಡಿ

ಬೆಂಗಳೂರು ಪಶುವೈದ್ಯಕೀಯ ವಿಜ್ಞಾನಗಳ ಕಾಲೇಜಿನ ಪಶುವೈದ್ಯ ಪ್ರಸೂತಿ ತಜ್ಞರಾದ ಡಾ. ಜಿ.ಜೆ. ರೇಣುಕಾರಾಧ್ಯ ಮಾತನಾಡಿ, ಪಶು ತಪಾಸಣೆ ವೇಳೆ ಕಂಡುಬಂದ ಪೌಷ್ಟಿಕ ಆಹಾರದ ಕೊರತೆ ಹಾಗೂ ಸಂತಾನೋತ್ಪತ್ತಿ ನಿರ್ವಹಣೆ ಬಗ್ಗೆ ವಿವರಣೆ ನೀಡಿದರು. ಸಂತಾನೋತ್ಪತ್ತಿ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಸೂಕ್ತ ಸಮಯದಲ್ಲಿ ಪಶುವೈದ್ಯರ ಸಲಹೆ ಪಡೆಯಲು ರೈತರಿಗೆ ಸೂಚಿಸಿದರು.

ರೈತನ ಆರ್ಥಿಕತೆಗೆ ಹೈನುಗಾರಿಕೆ ಆಸರೆ

ಕೃಷಿ ವಿದ್ಯಾರ್ಥಿಗಳ ಶಿಬಿರದ ಮಾರ್ಗದರ್ಶಕ ಹಾಗೂ ಕೃಷಿ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಮನು ಗಂಗಾಧರಯ್ಯ ಮಾತನಾಡಿ, ಕೃಷಿ ಮತ್ತು ಪಶುಸಂಗೋಪನೆ ನಡುವಿನ ಅವಿನಾಭಾವ ಸಂಬಂಧವನ್ನು ವಿವ-ರಿಸಿದರು. ರೈತನ ಆರ್ಥಿಕ ಸದೃಢತೆಗೆ ಹೈನುಗಾರಿಕೆಯ ಮಹತ್ವ ಹಾಗೂ ಒಟ್ಟಾರೆ ಕೃಷಿ ಕ್ಷೇತ್ರದ ಬೆಳವಣಿಗೆಗೆ ಪಶುಸಂಗೋಪನೆ ಕೊಡುಗೆ ನೀಡುತ್ತದೆ ಎಂದರು.

ವಿದ್ಯಾರ್ಥಿಗಳ ಶ್ರಮಕ್ಕೆ ಮೆಚ್ಚುಗೆ

ರೈತರನ್ನು ಸಂಪರ್ಕಿಸಿ, ಜಾನುವಾರುಗಳ ನೋಂದಣಿ ಹಾಗೂ ತಪಾಸಣೆಗೆ ಸೂಕ್ತ ವ್ಯವಸ್ಥೆ ಮಾಡಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಸಂಘಟಿಸಿದ ಕೃಷಿ ವಿದ್ಯಾರ್ಥಿಗಳ ಪ್ರಯತ್ನವನ್ನು ಪಶುವೈದ್ಯರು ಹಾಗೂ ಗ್ರಾಮಸ್ಥರು ಮೆಚ್ಚಿ ಅಭಿನಂದಿಸಿದರು. ಶಿಬಿರದ ಯಶಸ್ಸಿಗೆ ಸಹಕರಿಸಿದ ನೇರಳೆಕೆರೆ ಗ್ರಾಮಸ್ಥರಿಗೆ ಕೃಷಿ ವಿಶ್ವವಿದ್ಯಾನಿಲಯದ

## ಹೊಸ ಪಾರ್ಕಿಂಗ್ ವ್ಯವಸ್ಥೆಗೆ ಸಿದ್ಧತೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ನಗರದ ಪ್ರಮುಖ ರಸ್ತೆಗಳಲ್ಲಿ ಎರಡೂ ಬದಿಗಳಲ್ಲಿ ವಾಹನಗಳನ್ನು ನಿಲ್ಲಿಸುವುದರಿಂದ ಉಂಟಾಗುತ್ತಿರುವ ಸಂಚಾರ ಸಮಸ್ಯೆಗೆ ಕಡಿವಾಣ ಹಾಕಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಹೊಸ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ಸಿದ್ಧತೆ ನಡೆಸಿದೆ. ಬೆಂಗಳೂರು ವ್ಯಾಪ್ತಿಯ ಐದು ನಗರಪಾಲಿಕೆಗಳಲ್ಲಿನ ಪ್ರಮುಖ ರಸ್ತೆಗಳಲ್ಲಿ 'ಡೇ ಬೈ ಡೇ' ಅಥವಾ ಪರ್ಯಾಯ ದಿನಗಳ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ತರಲು ಜಿಬಿಎ ಮುಂದಾಗಿದೆ.**



ಈ ವ್ಯವಸ್ಥೆ ಜಾರಿಯಾದರೆ ಪ್ರತಿದಿನ ರಸ್ತೆಯ ಒಂದೇ ಬದಿಯಲ್ಲಿ ವಾಹನಗಳನ್ನು ನಿಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ. ಮರುದಿನ ಮತ್ತೊಂದು ಬದಿಯಲ್ಲಿ ವಾಹನ ನಿಲುಗಡೆಗೆ ಅವಕಾಶ ನೀಡುವ ಮೂಲಕ ರಸ್ತೆಯ ಒಂದು ಬದಿಯನ್ನು ಸಂಚಾರಕ್ಕೆ ಮುಕ್ತವಾಗಿಡುವ ಉದ್ದೇಶ ಹೊಂದಲಾಗಿದೆ. ಪ್ರಸ್ತುತ ನಗರದ ಅನೇಕ ಪ್ರಮುಖ ರಸ್ತೆಗಳಲ್ಲಿ ವಾಹನ ಸವಾರರು ರಸ್ತೆಯ ಎರಡೂ ಬದಿಗಳಲ್ಲೂ ವಾಹನಗಳನ್ನು ನಿಲ್ಲಿಸುತ್ತಿದ್ದಾರೆ. ಇದರಿಂದ ರಸ್ತೆಯ ಸಂಚಾರಕ್ಕೆ ಲಭ್ಯವಿರುವ ಜಾಗ ಕಡಿಮೆಯಾಗುತ್ತಿದ್ದು, ವಿಶೇಷವಾಗಿ ಬೆಳಗ್ಗೆ ಮತ್ತು ಸಂಜೆ ಪೀಕ್ ಅವರ್‌ಗಳಲ್ಲಿ ವಾಹನಗಳ ವೇಗ ಕುಂಠಿತವಾಗುತ್ತಿದೆ. ಕೆಲವೆಡೆ ದ್ವಿಚಕ್ರ ವಾಹನಗಳು, ಕಾರುಗಳು ಸೇರಿದಂತೆ ವಿವಿಧ ವಾಹನಗಳನ್ನು ರಸ್ತೆ ಬದಿಯಲ್ಲಿ ಅಡ್ಡಾದಿಡ್ಡಿಯಾಗಿ ನಿಲ್ಲಿಸುವುದರಿಂದ ಸಂಚಾರ ದಟ್ಟಣೆ ಮತ್ತಷ್ಟು ಹೆಚ್ಚುತ್ತಿದೆ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ರಸ್ತೆಯ ಒಂದು ಬದಿಯಲ್ಲಿ ಮಾತ್ರ ಪಾರ್ಕಿಂಗ್‌ಗೆ ಅವಕಾಶ ನೀಡುವ ವ್ಯವಸ್ಥೆ ಜಾರಿಗೆ ತರಲು ಜಿಬಿಎ ಚಿಂತನೆ ನಡೆಸಿದೆ. ದಿನಾಂಕದ ಆಧಾರದ ಮೇಲೆ ಪಾರ್ಕಿಂಗ್ ಬದಿಯನ್ನು ಬದಲಾಯಿಸುವ ವ್ಯವಸ್ಥೆ ರೂಪಿಸುವ ಸಾಧ್ಯತೆ ಇದೆ. ಉದಾಹರಣೆಗೆ, 1, 3, 5, 7, 9 ಸೇರಿದಂತೆ ಬೆಸ ದಿನಾಂಕಗಳಲ್ಲಿ ರಸ್ತೆಯ ಒಂದು ಬದಿಯಲ್ಲಿ ವಾಹನ ನಿಲ್ಲಿಸಲು ಅವಕಾಶ ನೀಡಬಹುದು. 2, 4, 6, 8, 10 ಸೇರಿದಂತೆ ಸಮ ದಿನಾಂಕಗಳಲ್ಲಿ ಮತ್ತೊಂದು ಬದಿಯಲ್ಲಿ ಪಾರ್ಕಿಂಗ್‌ಗೆ ಅವಕಾಶ ಕಲ್ಪಿಸಬಹುದು. ಹೀಗಾಗಿ ದಿನ ಬದಲಾದಂತೆ ಪಾರ್ಕಿಂಗ್ ಬದಿಯೂ ಬದಲಾಗಲಿದೆ. ಈ ಪರ್ಯಾಯ ಪಾರ್ಕಿಂಗ್ ವ್ಯವಸ್ಥೆಯಿಂದ ರಸ್ತೆಯ ಒಂದು ಬದಿ ಸದಾ ಸಂಚಾರಕ್ಕೆ ಮುಕ್ತವಾಗಿರಲಿದ್ದು, ವಾಹನಗಳ ಸುಗಮ ಸಂಚಾರಕ್ಕೆ ಅನುಕೂಲವಾಗಲಿದೆ. ರಸ್ತೆಯನ್ನು ವಿಸ್ತರಿಸದೆ ಇರುವ ರಸ್ತೆಯ ಲಭ್ಯ ಅಗಲವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಇದು ನೆರವಾಗಲಿದೆ ಎಂಬುದು ಜಿಬಿಎ ಅಧಿಕಾರಿಗಳ ಆಶಯ. ಮೊದಲ ಹಂತದಲ್ಲಿ ಸಂಚಾರ ದಟ್ಟಣೆ ಹೆಚ್ಚಿರುವ ಹಾಗೂ ಎರಡೂ ಬದಿಗಳಲ್ಲಿ ಪಾರ್ಕಿಂಗ್‌ನಿಂದ ಸಮಸ್ಯೆ ಎದುರಾಗುತ್ತಿರುವ ಪ್ರಮುಖ ರಸ್ತೆಗಳನ್ನು ಗುರುತಿಸಿ ವ್ಯವಸ್ಥೆ ಜಾರಿಗೆ ತರಲು ಸಿದ್ಧತೆ ನಡೆಯುತ್ತಿದೆ. ರಸ್ತೆ ಅಗಲ, ವಾಣಿಜ್ಯ ಚಟುವಟಿಕೆ, ಸ್ಥಳೀಯ ನಿವಾಸಿಗಳ ಅಗತ್ಯ ಹಾಗೂ ಸಂಚಾರ ಪ್ರಮಾಣವನ್ನು ಪರಿಗಣಿಸಿ ಪಾರ್ಕಿಂಗ್ ವ್ಯವಸ್ಥೆ ರೂಪಿಸುವ ಸಾಧ್ಯತೆ ಇದೆ. ಹೊಸ ವ್ಯವಸ್ಥೆ ಜಾರಿಯಾದ ಬಳಿಕ ವಾಹನ ಸವಾರರು ನಿಗದಿತ ದಿನದ ಪಾರ್ಕಿಂಗ್ ನಿಯಮವನ್ನು ಪಾಲಿಸಬೇಕಾಗುತ್ತದೆ. ನಿಯಮ ಉಲ್ಲಂಘಿಸಿ ನಿಷೇಧಿತ ಬದಿಯಲ್ಲಿ ವಾಹನ ನಿಲ್ಲಿಸಿದರೆ ದಂಡ ಸೇರಿದಂತೆ ಕ್ರಮ ಕೈಗೊಳ್ಳುವ ವ್ಯವಸ್ಥೆಯನ್ನೂ ಜಿಬಿಎ ಕೈಗೊಳ್ಳಲಿದೆ.

# ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲು ಬಿಜೆಪಿ ಒತ್ತಾಯ

## ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ

ವಿಜಯ ದುಂಬಿ ಸುದ್ದಿ....

**ಕಲಬುರಗಿ: ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದು, ಕಲಬುರಗಿ ಜಿಲ್ಲೆಯ ಎಲ್ಲಾ 11 ತಾಲೂಕುಗಳನ್ನು ತಕ್ಷಣವೇ 'ಬರಗಾಲ ಪೀಡಿತ ಪ್ರದೇಶ'ಗಳೆಂದು ಘೋಷಿಸಿ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಭಾರತೀಯ ಜನತಾ ಪಾರ್ಟಿ (ಬಿಜೆಪಿ) ವತಿಯಿಂದ ಅಶೋಕ್ ಬಗಲಿ ಅವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ಮಾನ್ಯ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಯಿತು.**



ಕಲಬುರಗಿ ಜಿಲ್ಲೆಯಾದ್ಯಂತ ಪ್ರಸಕ್ತ ಸಾಲಿನಲ್ಲಿ ಮಳೆ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ. ಇದರಿಂದಾಗಿ ಕೃಷಿ ಚಟುವಟಿ-ಕೆಗಳು ಸಂಪೂರ್ಣ ವಿಫಲಗೊಂಡು ರೈತರು ಕಂಗಾಲಾಗಿದ್ದಾರೆ. ಆದರೆ, ರಾಜ್ಯ ಸರ್ಕಾರವು ಜಿಲ್ಲೆಯ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸದೆ ಉದಾಶೀನತೆ ತೋರುತ್ತಿದೆ. ಹೀಗಾಗಿ ಸರ್ಕಾರ ತಕ್ಷಣವೇ ಸೂಕ್ತ ಆದೇಶ ಹೊರಡಿಸಿ, ಸಂಕಷ್ಟದಲ್ಲಿರುವ ರೈತರಿಗೆ ಪ್ರತಿ ಎಕರೆಗೆ 50,000 ರೂಪಾಯಿ ಪರಿಹಾರ ಧನ ಬಿಡುಗಡೆ ಮಾಡಬೇಕು ಎಂದು ಪತ್ರದಲ್ಲಿ ವಿನಂತಿಸಲಾಗಿದೆ. ರಾಜ್ಯ ಸರ್ಕಾರವು ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳದಿದ್ದಲ್ಲಿ, ಮುಂಬರುವ ದಿನಗಳಲ್ಲಿ ಜಿಲ್ಲೆಯಾದ್ಯಂತ ಸರ್ಕಾರದ ವಿರುದ್ಧ ಉಗ್ರ ಸ್ವರೂಪದ ಹೋರಾಟವನ್ನು ರೂಪಿಸಲಾಗುವುದು ಎಂದು ಬಿಜೆಪಿ ನಾಯಕರು ಎಚ್ಚರಿಕೆ ನೀಡಿದ್ದಾರೆ.

ಈ ಪ್ರತಿಭಟನಾ ಸಂದರ್ಭದಲ್ಲಿ ಮಂಡಲ ಅಧ್ಯಕ್ಷರಾದ ಶ್ರೀನಿವಾಸ ಜಿ. ದೇಸಾಯಿ, ಅಪ್ಪು ಕಣಕಿ, ಅವಿನಾಶ ಕುಲಕರ್ಣಿ, ಶಿವಯೋಗಿ ನಾಗನಹಳ್ಳಿ, ಲಿಂಗರಾಜ ಬಿರಾದಾರ, ವಿಶಾಲ ದರ್ಗಿ, ವೀರಣ್ಣಾ ಹೊನ್ನಳ್ಳಿ, ಮಲ್ಲೂ ಉದನೂರ, ರಾಮ್ಮು ಗುಮ್ಮಟ, ಗುರು ಪಟ್ಟಣ, ರಾಜು ದೇವದುರ್ಗ, ರವಿ ಹಾಗರಗಿ, ಶಂಭುಲಿಂಗ ಬಳಬಟ್ಟಿ, ಕುಮ್ಮಣಗೌಡ ಪಾಟೀಲ, ಅನಿಲ್ ಜಾಧವ, ವೀರು ಪಾಟೀಲ ರಾಯಕೋಡ, ವಿಶ್ವನಾಥ ಸಾಲಿಮಠ ಚವ್ಹಾಣ, ಅರವಿಂದ ನಾಯಕ ಹಾಗೂ ಪಕ್ಷದ ವಿವಿಧ ಪದಾಧಿಕಾರಿಗಳು, ಪಾಲಿಕೆ ಸದಸ್ಯರು, ಪ್ರಮುಖ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಸರಕಾರಿ ಶಾಲೆಯಲ್ಲಿ ಕೃಷಿ ಪಾಠ



ವಿಜಯ ದುಂಬಿ ಸುದ್ದಿ....

**ನೆಲಮಂಗಲ: ತಾಲ್ಲೂಕಿನ ಕಸಬಾ ಹೋಬಳಿಯ ಮದಲಕೋಟೆ ಗ್ರಾಮದ ಸರ್ಕಾರಿ ಶಾಲೆಯ ಮಕ್ಕಳಿಗೆ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಬಿ.ಎಸ್ಸಿ. ಕೃಷಿ ವಿದ್ಯಾರ್ಥಿಗಳು ವಾರಕ್ಕೆ ಎರಡು ಗಂಟೆಗಳ ಕಾಲ ಕೃಷಿ ವಿಷಯದ ಕುರಿತು ವಿಶೇಷ ಪಾಠ ಪ್ರವಚನ ನಡೆಸಿಕೊಡುತ್ತಿದ್ದಾರೆ.**

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ತಮ್ಮ 'ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮ'ದ ಭಾಗವಾಗಿ

> **"ಕೃಷಿ ಕ್ಷೇತ್ರದಲ್ಲಿ ಯುವಕರು ನವೋದ್ಯಮಗಳನ್ನು ಪ್ರಾರಂಭಿಸಲು, ಸ್ವಂತ ಉದ್ಯೋಗಾವಕಾಶಗಳನ್ನು ಸೃಷ್ಟಿಸಿಕೊಳ್ಳಲು, ನಿರುದ್ಯೋಗ ನಿವಾರಿಸಲು ಹಾಗೂ ಯುವಕರ ಸಬಲೀಕರಣಕ್ಕೆ ಈ ಕೃಷಿ ಶಿಕ್ಷಣವು ಮಹತ್ವದ ಹೆಜ್ಜೆಯಾಗಲಿದೆ."**
> **-ಡಾ. ಮನು ಗಂಗಾಧರಯ್ಯ, ಶಿಬಿರಾಧಿಕಾರಿಗಳು, ಬೆಂಗಳೂರು ಕೃಷಿ ವಿಶ್ವವಿದ್ಯಾಲಯ.**

ಕಳೆದ ಒಂದು ತಿಂಗಳಿನಿಂದ ಮದಲಕೋಟೆ ಗ್ರಾಮದಲ್ಲಿ ವಾಸ್ತವ್ಯ ಹೂಡಿದ್ದಾರೆ. ರೈತರ ದಿನನಿತ್ಯದ ಬದುಕು, ಗ್ರಾಮದ ಸಾಮಾಜಿ-ಕ ಹಾಗೂ ಆರ್ಥಿಕ ಜೀವನವನ್ನು ನಿಕಟವಾಗಿ ಅರಿತು, ಕೃಷಿ ಕ್ಷೇತ್ರದ ಚಟುವಟಿಕೆಗಳನ್ನು ಸೂಕ್ಷ್ಮವಾಗಿ ಅರ್ಥೈಸಿಕೊಳ್ಳುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಯುವಜನತೆಯನ್ನು ಕೃಷಿಯತ್ತ ಸೆಳೆಯುವ ಪ್ರಯತ್ನ:

ದೇಶದ ಅಭಿವೃದ್ಧಿಗೆ ಕೃಷಿ ಕ್ಷೇತ್ರದ ಕೊಡುಗೆ ಅಪಾರ. ಆದರೆ ಇತ್ತೀಚಿನ ದಿನಗಳಲ್ಲಿ ಕೈಗಾ-ರಿಕೀಕರಣ, ನಗರೀಕರಣ ಹಾಗೂ ಹವಾಮಾನ ವೈಪರೀತ್ಯಗಳಿಂದಾಗಿ ಕೃಷಿ ಕ್ಷೇತ್ರವು ತೀವ್ರ ಸಂಕಷ್ಟ ಎದುರಿಸುತ್ತಿದೆ. ಮತ್ತೊಂದೆಡೆ, ದಿನೇ ದಿನೇ ದ್ವಿಗುಣಗೊಳ್ಳುತ್ತಿರುವ ಜನಸಂಖ್ಯೆಗೆ ತಕ್ಕಂತೆ ಆಹಾರೋತ್ಪಾದನೆ ಹೆಚ್ಚಿಸಬೇಕಾದ ಅಗತ್ಯವಿದೆ.

ಈ ಸವಾಲುಗಳನ್ನು ಎದುರಿಸಲು ಕೃಷಿ ರಂಗವನ್ನು ಲಾಭದಾಯಕವಾಗಿಸುವುದು ಮತ್ತು ಯುವಕರನ್ನು ಈ ಕ್ಷೇತ್ರದತ್ತ ಆಕರ್ಷಿಸುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಮದಲಕೋಟೆ ಗ್ರಾಮದ ಸರ್ಕಾರಿ ಶಾಲೆಯ 8, 9 ಮತ್ತು 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಮೂಲಭೂತ ಕೃಷಿ ಶಿಕ್ಷಣವನ್ನು ನೀಡಲಾಗುತ್ತಿದೆ.

# 05 ರಂದು 'ಪ್ರಜಾ ಸೇವಾ ಆಂದೋಲನ'ಕ್ಕೆ ಚಾಲನೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು ಗ್ರಾಮಾಂತರ: ಜನಸಾಮಾನ್ಯರ ಕುಂದುಕೊರತೆಗಳನ್ನು ಅವರ ಮನೆಬಾಗಿಲಿನಲ್ಲೇ ಆಲಿಸಿ ಸ್ಥಳದಲ್ಲೇ ಪರಿಹಾರ ಒದಗಿಸುವ ಸರ್ಕಾರದ ವಿನೂತನ 'ಪ್ರಜಾ ಸೇವಾ ಜನಾಂದೋಲನ' ಕಾರ್ಯಕ್ರಮಕ್ಕೆ ದೇವನಹಳ್ಳಿ ತಾಲೂಕಿನ ವಿಜಯಪುರದಲ್ಲಿ ಚಾಲನೆ ದೊರೆಯಲಿದೆ. ಸೆಪ್ಟೆಂಬರ್ 05ರ ಶನಿವಾರದಂದು ಪಟ್ಟಣದ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಮಧ್ಯಾಹ್ನ 12.30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಮೊದಲ ಪ್ರಜಾ ಸೇವಾ ಆಂದೋಲನ ಸಭೆ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.**



ದೇವನಹಳ್ಳಿ ಟೌನ್‌ನ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದ ಈ ಯೋಜನೆಯಡಿ ಪ್ರತಿ ಶನಿವಾರ ತಾಲೂಕು ಮಟ್ಟದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಹಾಗೂ ಹೋಬಳಿ ಮಟ್ಟದಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಜನಾಂದೋಲನ ಸಭೆಗಳು ನಡೆಯಲಿವೆ ಎಂದರು.

ಅರ್ಜಿ ನಮೂನೆ ವಿತರಣೆ: ಸಾರ್ವಜನಿಕರ ಮನೆಬಾಗಿಲಿಗೆ ಮುಖ್ಯಮಂತ್ರಿಗಳ ಸಂದೇಶ ಪತ್ರ ಹಾಗೂ ಕುಂದುಕೊರತೆ ಅರ್ಜಿ ನಮೂನೆಗಳನ್ನು ವಿತರಿಸಲು ಪಿಡಿಒ ಸೇ-ರಿದಂತೆ ಸ್ಥಳೀಯ ಮಟ್ಟದ ಅಧಿಕಾ-ರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ.

ಸಾರ್ವಜನಿಕರು ಈ ನಮೂನೆಯಲ್ಲಿ ತಮ್ಮ ವ್ಯಾಪ್ತಿಯ ಇಲಾಖೆ ಹಾಗೂ ಸಮಸ್ಯೆಗಳ ವಿವರ ಭರ್ತಿ ಮಾಡಿ ಸಭೆಯ ದಿನದಂದು ನಿಗದಿಪಡಿಸಿದ ಕೌಂಟರ್‌ಗಳಲ್ಲಿ ಸಲ್ಲಿಸಬಹುದಾಗಿದೆ.

**ಸ್ಥಳದಲ್ಲೇ ಪರಿಹಾರ:** ಪಿಂಚಣಿ ಸೇವೆ, ಸಂಧ್ಯಾ ಸುರಕ್ಷಾ, ವಿಧವಾ ವೇತನ, ವಿಶೇಷ ಚೇತನರ ಯೋಜನೆಗಳು, ಕಂದಾಯ ಸಮಸ್ಯೆಗಳು, ಗ್ಯಾರಂಟಿ ಯೋಜನೆಗಳು, ಹೊಸ ಪಡಿತರ ಚೀಟಿ, ರಸ್ತೆ, ಕುಡಿಯುವ ನೀರು, ಶಾಲೆ-ಅಂಗನವಾಡಿ ಅಭಿವೃದ್ಧಿ ಹಾಗೂ ಪೊಲೀಸ್ ಇಲಾಖೆಯ ಸೇವೆ ಸೇರಿದಂತೆ ವಿವಿಧ ಇಲಾಖೆಗೆ ಸಂಬಂಧಿಸಿದ ಅಹವಾಲುಗಳನ್ನು ಆಲಿಸಲಾಗುವುದು. ಸ್ಥಳದಲ್ಲೇ ಪರಿಹರಿಸಬಹುದಾದ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಒದಗಿಸಲಾಗುತ್ತದೆ.

ಉಳಿದ ಅರ್ಜಿಗಳಿಗೆ ಸ್ವೀಕೃತಿ ಪತ್ರ ನೀಡಿ, ಹಂತ-ಹಂತವಾಗಿ ಪರಿಹರಿಸಲು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಕಾರದೊಂದಿಗೆ ಕ್ರಮವಹಿಸಲಾಗುವುದು. ಅರ್ಜಿ ಸ್ವೀಕಾರಕ್ಕಾಗಿ ವಿಶೇಷ ಕೌಂಟರ್‌ಗಳ ಸ್ಥಾಪನೆ, ಅರ್ಹ ಫಲಾನುಭವಿಗಳಿಗೆ ಆದೇಶ ಪತ್ರ ವಿತರಣೆ ಹಾಗೂ ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸುವಂತೆ ಜಿಲ್ಲಾಧಿಕಾರಿಗಳು ವಿವಿಧ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಡಾ. ವಾಸಂತಿ ಅಮರ್, ಎಸಿ ಮಂಜುನಾಥ್, ಸಿಪಿಒ ರಾಮಕೃಷ್ಣ, ದೇವನಹಳ್ಳಿ ಇಒ ಮುನಿರಾಜು ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪ್ರಮುಖ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂದು ಕೆಂಪಲಿಂಗನಹಳ್ಳಿ ಸುತ್ತಮುತ್ತಲು ವಿದ್ಯುತ್ ವ್ಯತ್ಯಯ

ವಿಜಯ ದುಂಬಿ ಸುದ್ದಿ....

**ನೆಲಮಂಗಲ: ತಾಲೂಕಿನ ಕೆಂಪಲಿಂಗನಹಳ್ಳಿ ರಸ್ತೆ ಅಗಲೀಕರಣ ಕಾಮಗಾರಿಯು ಪಿಡಬ್ಲ್ಯುಡಿ ಇಲಾಖೆಯಿಂದ ನಡೆಯುತ್ತಿರುವ ಕಾರಣ ರಸ್ತೆ ಅಕ್ಕಪಕ್ಕವಿರುವ ವಿದ್ಯುತ್ ಕಂಬಗಳು ಮತ್ತು ಪರಿವರ್ತಕಗಳನ್ನು ಸ್ಥಳಾಂತರಿಸಬೇಕಾಗಿರುವ ಕಾರಣ ಸೆ.3ರ ಬೆಳಗ್ಗೆ 9ಗಂಟೆಯಿಂದ ಸಂಜೆ 5ಗಂಟೆಯವರೆಗೆ 66/11ಕೆವಿ ನೆಲಮಂಗಲ ವಿದ್ಯುತ್ ವಿತರಣಾ ಕೇಂದ್ರ ವ್ಯಾಪ್ತಿಗೆ ಬರುವ 11ಕೆವಿ ಪೂರಕವಾದ ಎನ್‌ಎಫ್-7, ಎನ್‌ಎಫ್11,ಎನ್‌ಎಫ್ 14ಗಳಿಂದ ವಿದ್ಯುತ್ ಸರಬರಾಜು ಆಗುವ ಪ್ರದೇಶಗಳಾದ ಕೆಂಪಲಿಂಗನಹಳ್ಳಿ,**

ಓಬನಾಯಕನಹಳ್ಳಿ, ಆರ್ಗಾನಿಕ್ ಇಂಡಸ್ಟ್ರಿ,ಯಲಚಗೆರೆ, ಯಲಚಗೆರೆ ಕಾಲೋನಿ, ಚಿಕ್ಕಮಾರನಹಳ್ಳಿ, ಹೊಸಪಾಳ್ಯ, ಬೈರಸಂದ್ರ, ಜೋಗಿಪಾಳ್ಯ, ಚಿಕ್ಕಪುಟ್ಟಯ್ಯನಪಾಳ್ಯ,ಹಾಜಿಪಾಳ್ಯ, ಕೈಗಾರಿಕಾ ಪ್ರದೇಶಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುತ್ತದೆ ಆದ್ದರಿಂದ ವಿದ್ಯುತ್ ಆಡಚಣೆಗಾಗಿ ಗ್ರಾಹಕರು ,ಸಾರ್ವಜನಿಕರು ಸಹಕರಿಸಬೇಕೆಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಕೆಪಿಎಸ್‌ಸಿ ಅಕ್ರಮ : ಖುದ್ದು ಪ್ರಶ್ನೆ ಬರೆದು ಓಎಂಆರ್ ತಿದ್ದುತ್ತಿದ್ದ ಜ್ಞಾನೇಂದ್ರ..!

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನಡೆದ ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ನಡೆದಿರುವ ಕೋಟ್ಯಂತರ ರೂ.ಗಳ ಅಕ್ರಮದ ತನಿಖೆಯಲ್ಲಿ 400 ಹುದ್ದೆಗಳ ಭಾರಿ ಅಕ್ರಮದ ಇಡೀ ಜಾಲವು ಅತ್ಯಂತ ವ್ಯವಸ್ಥಿತವಾಗಿ, ಚಲನಚಿತ್ರದ ದೃಶ್ಯಗಳಂತೆ (ಫಿಲಿಸ್ಟೈಲ್) ಕಾರ್ಯನಿರ್ವಹಿಸಿರುವುದು ಅಪರಾಧ ತನಿಖಾ ದಳದ ತನಿಖೆಯಿಂದ ಹೊರಬಿದ್ದಿದೆ.**



ಪ್ರಕರಣದ ಪ್ರಮುಖ ಆರೋಪಿಯಾಗಿರುವ ಕೆಪಿಎಸ್‌ಸಿ ಮಾಜಿ ಪರೀಕ್ಷಾ ನಿಯಂತ್ರಕ ಹಾಗೂ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗಾವರ್ ಮತ್ತು ಪ್ರಮುಖ ಮಧ್ಯವರ್ತಿ ಬಸವರಾಜ್ ಕನ್ನಾಳೆ ಅವರನ್ನು ಈಗಾಗಲೇ ಸಿಐಡಿ ಅಧಿಕಾರಿಗಳು ಬಂಧಿಸಿದ್ದು, ತನಿಖೆಯಲ್ಲಿ ಸ್ಫೋಟಕ ಮಾಹಿತಿಗಳು ಬಹಿರಂಗಗೊಂಡಿವೆ. ಮೂರು ಹಂತ: ಮೊದಲ ಹಂತ –ಪ್ರಶ್ನೆ ಪತ್ರಿಕೆ ಸೋರಿಕೆ: ಪರೀಕ್ಷೆಗೂ ಮುಂಚಿತವಾಗಿ ಸಿದ್ಧಪಡಿಸುತ್ತಿದ್ದ 5 ಮಾದರಿ ಪ್ರಶ್ನೆ ಪತ್ರಿಕೆಗಳ ಪೈಕಿ ಅಂತಿಮಗೊಳ್ಳುತ್ತಿದ್ದ ಪ್ರಶ್ನೆಗಳನ್ನು ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಸ್ವತಃ ತನ್ನ ಕೈಯಿಂದ ಬರೆದುಕೊಳ್ಳುತ್ತಿದ್ದರು.

ಪರೀಕ್ಷೆಗೆ ಕೇವಲ ಎರಡು ದಿನಗಳು ಬಾಕಿ ಇರುವಾಗ ಈ ಅತಿಮುಖ್ಯ ಪ್ರಶ್ನೆ ಪತ್ರಿಕೆಯನ್ನು ಮಧ್ಯವರ್ತಿ ಬಸವರಾಜ್‌ಗೆ ತಲುಪಿಸಲಾಗುತ್ತಿತ್ತು. ರಾಜಾಜಿನಗರದ ಕಚೇರಿಯಲ್ಲಿ ಆಕಾಂಕ್ಷಿಗಳೊಂದಿಗೆ ಲಕ್ಷಾಂತರ ರೂ.ಗಳಿಗೆ (ಪ್ರತಿ ಹುದ್ದೆಗೆ ಅಂ–ದಾಜು 40 ಲಕ್ಷ ರೂ.) ಡೀಲ್ ಕುದುರಿಸುತ್ತಿದ್ದ ಬಸವರಾಜ್, ಆ ಅಭ್ಯರ್ಥಿಗಳನ್ನು ಬೆಂಗಳೂರು, ತುಮಕೂರು ಹಾಗೂ ಆಂಧ್ರಪ್ರದೇಶದ ನಾನಾ ರೆಸಾರ್ಟ್‌ಗಳಲ್ಲಿ ರಹಸ್ಯವಾಗಿ ಕೂಡಿಹಾಕಿ ಉತ್ತರ ಬರೆಯಲು ತರಬೇತಿ ಕೊಡಿಸುತ್ತಿದ್ದ.

ಬಳಿಕ ಅವರನ್ನು ಖಾಸಗಿ ಬಸ್‌ಗಳಲ್ಲಿ ಪರೀಕ್ಷಾ ಕೇಂದ್ರಗಳಿಗೆ ಕರೆತರುತ್ತಿದ್ದ. ಎರಡನೇ ಹಂತ–ಓಎಂಆರ್ ಶೀಟ್ ಕರಡು ತಿದ್ದುಪಡಿ– ಪರೀಕ್ಷೆಯಲ್ಲಿ ಯಾವುದೇ ಆತಂಕವಿಲ್ಲದೆ ಬರೆಯಲು ಸಾಧ್ಯವಾಗದ ಅಥ–ವಾ ಅಂಕ ಕಡಿಮೆ ಪಡೆಯುವ ನಿರೀಕ್ಷೆಯಿದ್ದ ಅಭ್ಯರ್ಥಿಗಳ ಓಎಂಆರ್‌ಶೀಟ್‌ಗಳನ್ನು ಪರೀಕ್ಷಾ ನಿಯಂತ್ರಕ ಜ್ಞಾನೇಂದ್ರ ಕುಮಾರ್ ಅವರೇ ನೇರವಾಗಿ ಕಚೇರಿಯಲ್ಲಿ ತಿದ್ದಿ, ಅವರಿಗೆ ಉನ್ನತ ಮೆರಿಟ್ ಬರುವಂತೆ ಅಂಕಗಳನ್ನು ಕೃತಕವಾಗಿ ಹೆಚ್ಚಿಸುತ್ತಿದ್ದರು. ಮೂರನೇ ಹಂತ –ಸಂದರ್ಶನ ಮತ್ತು ಅಂತಿಮ ನೇಮಕಾತಿ–1:3 ಅನುಪಾತದಲ್ಲಿ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಅವರ ಮುಂದೆ ಹಾಜರಾಗುತ್ತಿದ್ದ ಅಭ್ಯರ್ಥಿಗಳ ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನದ ಅಂಕಗಳನ್ನು ಪರಸ್ಪರ ಮ್ಯಾಚ್ ಮಾಡಿ, ಅಂತಿಮವಾಗಿ ಯಾವುದೇ ಅಡೆತಡೆಯಿಲ್ಲದೆ ಅಕ್ರಮ ನೇಮಕಾತಿ ಆದೇಶಗಳನ್ನು ಕೊಡಿಸಲಾಗುತ್ತಿತ್ತು.

ಕನ್ನಾಳೆ ಮನೆಯಲ್ಲಿ ಹಾಲ್ ಟಿಕೆಟ್ ಜಪ್ತಿ: ಮಧ್ಯವರ್ತಿ ಬಸವರಾಜ್ ಕನ್ನಾಳೆ ನಿವಾಸದ ಮೇಲೆ ಸಿಐಡಿ ಅಧಿಕಾರಿಗಳು ನಡೆಸಿದ ದಾಳಿ ಮತ್ತು ಶೋಧದ ವೇಳೆ ಮತ್ತಷ್ಟು ಸ್ಫೋಟಕ ಸಾಕ್ಷ್ಯಗಳು ಲಭಿಸಿವೆ. ಪಶುವೈದ್ಯಾಧಿಕಾರಿ ಪರೀಕ್ಷೆ ಮಾತ್ರವಲ್ಲದೆ, ಇತರೆ ಸ್ಪರ್ಧಾತಕ ಪರೀಕ್ಷೆಗಳಿಗೂ ಈ ಜಾಲವು ಕೈಹಾಕಿರುವುದು ದೃಢಪಟ್ಟಿದೆ. ಕನ್ನಾಳೆ ಮನೆಯಿಂದ 2025ರಲ್ಲಿ ನಡೆದ ಬಿ ಗ್ರೂಪ್ ಹುದ್ದೆಗಳ ನೇಮಕಾತಿ ಪರೀಕ್ಷೆಗೆ ಹಾಜರಾಗಿದ್ದ 6 ಅಭ್ಯರ್ಥಿಗಳ ಪ್ರವೇಶಪತ್ರಗಳು ಜಪ್ತಿಯಾಗಿವೆ. ಈ ಹಿನ್ನೆಲೆಯಲ್ಲಿ ಆ 6 ಜನ ಅಭ್ಯರ್ಥಿಗಳಿಗೂ ಸಿಐಡಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಲಾಗಿದೆ.

40 ಲಕ್ಷದಿಂದ 80 ಲಕ್ಷದವರೆಗೆ ಡೀಲ್: ತನಿಖೆಯಲ್ಲಿ ಪ್ರತಿ ಅಭ್ಯರ್ಥಿಯಿಂದ ಹುದ್ದೆಗೆ ಅನುಗುಣವಾಗಿ 40 ಲಕ್ಷದಿಂದ 80 ಲಕ್ಷದವರೆಗೆ ಹಣ ಪಡೆಯಲಾಗುತ್ತಿತ್ತು ಎಂಬ ಆರೋಪಗಳು ಹೊರಬಿದ್ದಿವೆ. ಕೆಲ ಅಭ್ಯರ್ಥಿಗಳು ಹಣ ಪಾವತಿಸಿ ಅಕ್ರಮ ಮಾರ್ಗದ ಮೂಲಕ ಪರೀಕ್ಷೆಗೆ ಹಾಜರಾಗಿದ್ದೇವೆ ಎಂದು ಸಿಐಡಿ ಮುಂದೆ ಹೇಳಿಕೆ ನೀಡಿದ್ದಾರೆ. ಕೆಲ ಅಭ್ಯರ್ಥಿಗಳು ಇದೀಗ ತನಿಖೆಗೆ ಸಹಕರಿಸಲು ಮುಂದಾಗಿದ್ದು, ತಮ ಹೇಳಿಕೆಗಳನ್ನು ದಾಖಲಿಸಿಕೊಂಡಿರುವುದಾಗಿ ವರದಿಗಳು ತಿಳಿಸಿವೆ. ಈ ಹೇಳಿಕೆಗಳು ಪ್ರಕರಣದ ಹಣದ ವ್ಯವಹಾರ, ಪ್ರಶ್ನೆಪತ್ರಿಕೆ ಸೋರಿಕೆಯ ಮೂಲ ಮತ್ತು ಮಧ್ಯವರ್ತಿಗಳ ಜಾಲದ ಬಗ್ಗೆ ಹೆಚ್ಚಿನ ಸುಳಿವು ನೀಡುವ ಸಾಧ್ಯತೆ ಇದೆ.

ರೆಸಾರ್ಟ್‌ಗಳಲ್ಲಿ ಸ್ಪೆಷಲ್ ಪರೀಕ್ಷೆ?: ಈ ಪ್ರಕರಣದ ಅತ್ಯಂತ ಗಂಭೀರ ಅಂಶಗಳಲ್ಲಿ ಒಂದಾಗಿ ರಹಸ್ಯ ಸ್ಥಳಗಳಲ್ಲಿ ಅಭ್ಯರ್ಥಿಗಳನ್ನು ಇರಿಸಿ ಪರೀಕ್ಷೆಗೆ ಸಿದ್ಧಪಡಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಸಿಐಡಿ ತನಿಖೆಯ ಪ್ರಕಾರ, ಹಣ ಪಾವತಿಸಿದ್ದರೆಂದು ಶಂಕಿಸಲಾದ ಕೆಲವು ಅಭ್ಯರ್ಥಿಗಳನ್ನು ಬೆಂಗಳೂ–ರಿನ ದೇವಣಹಳ್ಳಿ ಪ್ರದೇಶ, ತುಮಕೂರಿನ ದೇವರಾಯನದುರ್ಗ ಹಾಗೂ ಆಂಧ್ರಪ್ರದೇಶದ ಸ್ಥಳಗಳಿಗೆ ಕರೆದೊಯ್ಯಲಾಗಿತ್ತು ಎಂಬ ಮಾಹಿತಿ ಹೊರಬಂದಿದೆ. ಅಲ್ಲಿ ಅವರಿಗೆ ತರಬೇತಿ ನೀಡಲಾಗಿತ್ತು ಮತ್ತು ನಂತರ ಪರೀಕ್ಷಾ ಕೇಂದ್ರಗಳಿಗೆ ಕರೆದೊಯ್ಯಲಾಗುತ್ತಿತ್ತು ಎಂದು ವರದಿಯಾಗಿದೆ.

## ಕಾರಂಜಾ ಎಂ.ಎಸ್.ಡಬ್ಲ್ಯೂ ಕಾಲೇಜನಲ್ಲಿ ವಿದ್ಯಾರ್ಥಿಗಳ ಸ್ವಾಗತ, ಮತ್ತು ಬೀಳ್ಕೊಡ ಸಮಾರಂಭ

ವಿಜಯ ದುಂಬಿ ಸುದ್ದಿ....

**ಬೀದರ್: ಸಾಮ್ರಾಟ್ ಅಶೋಕ್ ಪದವಿ ಕಾಲೇಜಿನ ಪ್ರಥ–ಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಹಾಗೂ ಕಾರಂಜಾ ಎಂ.ಎಸ್.ಡಬ್ಲ್ಯೂ ಪಿ.ಜಿ. ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ ಇಲ್ಲಿಯ ನೌಬಾದ್‌ನ ಲುಂಬಿಣಿ ಎಜುಕೇಷನ್ ಆ?ಯಂಡ್ ಚಾರಿಟಬಲ್ ಟ್ರಸ್ಟ್ ಸಭಾಂಗಣದಲ್ಲಿ ಈಚೆಗೆ ನಡೆಯಿತು.**



ವಿದ್ಯಾರ್ಥಿಗಳು ಕಠಿಣ ಪರಿಶ್ರಮದ ಮೂಲಕ ಜೀವನದಲ್ಲಿ ಉನ್ನತ ಸಾಧನೆಗೆ ಪ್ರಯತ್ನಿಸಬೇಕು ಎಂದು ಉದ್ಘಾಟನೆ ನೆರವೇರಿಸಿದ ಡಿಸಿಸಿ ಬ್ಯಾಂಕ್‌ನ ನೌಬಾದ್ ಶಾಖೆ ವ್ಯವಸ್ಥಾಪಕ ಬಿ. ಶಿವಪ್ರಸಾದ್ ಹೇಳಿದರು. ಸಂಸ್ಥೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಸ್ನಾತಕ ಹಾಗೂ ಸ್ನಾತಕೋತ್ತರ ಶಿಕ್ಷಣ ನೀಡುತ್ತಿದೆ. ಹೀಗಾಗಿ ವಿದ್ಯಾರ್ಥಿಗಳು ವಿವಿಧ ಪರೀಕ್ಷೆಗಳಲ್ಲಿ ಸಾಧನೆ ತೋರುತ್ತಿದ್ದಾರೆ. ಅನೇಕ ವಿದ್ಯಾರ್ಥಿಗಳು ಉನ್ನತ ಹುದ್ದೆಗಳಲ್ಲಿದ್ದಾರೆ ಎಂದು ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಅಧ್ಯಕ್ಷೆ ಪ್ರೇಮಲತಾ ಎಸ್. ಮೇಲ್ಕೇರಿ ತಿಳಿಸಿದರು. ವಿದ್ಯಾ ವಿಕಾಸ ಎಂ.ಎಸ್.ಡಬ್ಲ್ಯೂ ಕಾಲೇಜು ಪಾಚಾರ್ಯ ಲಕ್ಷ್ಮಣ ಮಂಜಾಳಕರ್, ಗೋವಿಂದರಾವ್ ಮುಳೆ ಕಾಲೇಜ್ ಆಫ್ ಎಜುಕೇಷನ್ ಪ್ರಾಚಾರ್ಯ ವಿಜಯಕುಮಾರ ವಾಘಮಾರೆ, ಕಾರಂಜಾ ಎಂ.ಎಸ್.ಡಬ್ಲ್ಯೂ ಪಿಜಿ ಕಾಲೇಜು ಪ್ರಾಚಾರ್ಯ ಮೋಹನಂದ ಕೋಹಿನೂರ್, ಸಂಪನ್ಮೂಲ ವ್ಯಕ್ತಿ ಶುಕ್ರೂದ್ದಿನ್, ಸಾಮ್ರಾಟ್ ಅಶೋಕ್ ಪದವಿ ಕಾಲೇಜು ಪ್ರಾಚಾರ್ಯ ವಿಜಯಕುಮಾರ ಫುಲೆ ಮತ್ತಿತರರು ಇದ್ದರು. ವಿದ್ಯಾರ್ಥಿಗಳಿಂದ ನಡೆದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಗಮನ ಸೆಳೆದವು.

# ಹಲ್ದ್ವಾನಿ ಶುದ್ಧೀಕರಣ ವಿವಾದ : ರಾಹುಲ್ ಗಾಂಧಿ ವಿರುದ್ಧ ಬುದ್ಧಿ ಶುದ್ಧಿ ಯಜ್ಞ



ವಿಜಯ ದುಂಬಿ ಸುದ್ದಿ....

**ಡೆಹ್ರಾಡೂನ್(ಉತ್ತರಾಖಂಡ): ಉತ್ತರಾಖಂಡದ ಹಲ್ದ್ವಾನಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ರ್‍ಯಾಲಿ ನಂತರ ನಡೆದ ಸ್ಥಳದ ಶುದ್ಧೀಕರಣ ವಿವಾದ ತೀವ್ರ ರಾಜಕೀಯ ಸಂಘರ್ಷಕ್ಕೆ ಕಾರಣವಾಗಿದೆ. ಈ ವಿವಾದದ ಕೇಂದ್ರಬಿಂದುವಾಗಿರುವ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅವರನ್ನು ಗುರಿಯಾಗಿಸಿಕೊಂಡು ಬಿಜೆಪಿ ಪರಿಶಿಷ್ಟ ಜಾತಿ (ಎಸ್‌ಸಿ) ಮೋರ್ಚಾ ಡೆಹ್ರಾಡೂನ್‌ನಲ್ಲಿ ಬುದ್ಧಿ ಶುದ್ಧಿ ಯಜ್ಞ ನಡೆಸಿದೆ.**

ವಿವಾದದ ಹಿನ್ನೆಲೆ: ಆಗಸ್ಟ್ 11 ರಂದು ಹಲ್ದ್ವಾನಿಯ ರಾಮಲೀಲಾ ಮೈದಾನದಲ್ಲಿ ನಡೆದ ಕಾಂಗ್ರೆಸ್ ರ್‍ಯಾಲಿ ಬಳಿಕ ಆ ಸ್ಥಳದಲ್ಲಿ ಶುದ್ಧೀಕರಣ ಮಾಡಿ ಹವನ ನಡೆಸಲಾಗಿತ್ತು. ಇದು ಮಲ್ಲಿಕಾರ್ಜುನ ಖರ್ಗೆ ಅವರ ದಲಿತ ಗುರುತಿಗೆ ಅಪಮಾನ ಮಾಡುವ ಯತ್ನ ಹಾಗೂ ಅಸ್ಪೃಶ್ಯತೆಯ ಕೃತ್ಯ ಎಂದು ಕಾಂಗ್ರೆಸ್ ತೀವ್ರವಾಗಿ ಆಕ್ಷೇಪಿಸಿತ್ತು. ಈ ಆಚರಣೆಯಲ್ಲಿ ಭಾಗಿಯಾದವರ ವಿರುದ್ಧ ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯಡಿ ಎಫ್‌ಐಆರ್ ದಾಖಲಿಸುವಂತೆ ಒತ್ತಾಯಿಸಿ ಕಾಂಗ್ರೆಸ್ ಕಾರ್ಯಕರ್ತರು ಉತ್ತರಾಖಂಡದಾದ್ಯಂತ ಪೊಲೀಸ್ ಠಾಣೆಗಳಿಗೆ ದೂರು ನೀಡಿದ್ದಾರೆ ಹಾಗೂ ಸಚಿವಾಲಯದ ಹೊರಗೆ ಪ್ರತಿಭಟನೆ ನಡೆಸಿದ್ದಾರೆ. ಕಾಂಗ್ರೆಸ್ ಈ ಘಟನೆಯನ್ನು ರಾಜ–ಕೀಯ ಲಾಭಕ್ಕಾಗಿ ಜಾತಿಗೆ ಜೋಡಿಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

ಮತ್ತೊಂದೆಡೆ, ವಾಲೀಕಿ ಸಮುದಾಯದ ಅಮಿತ್ ಕುಮಾರ್ ಎಂಬುವವರ ದೂರಿನ ಮೇರೆಗೆ, ರಾಹುಲ್ ಗಾಂಧಿಯವರ ಹೇಳಿಕೆಗಳು ಸಮುದಾಯದ ಭಾವನೆಗಳಿಗೆ ನೋವುಂಟುಮಾಡಿವೆ ಮತ್ತು ಜಾತೀಯತೆ ಬಿತ್ತುವಂತಿವೆ ಎಂದು ಆರೋಪಿಸಿ ರಾಹುಲ್ ಗಾಂಧಿ ವಿರುದ್ಧ ಬಿಎನ್–ಎಸ್ ಸೆಕ್ಷನ್‌ಗಳು ಹಾಗೂ ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಎಫ್‌ಐಆರ್ ದಾಖಲಿಸಲಾಗಿದೆ. ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ನಾಯಕರು ಸುಳ್ಳುಗಳನ್ನು ಹರಡುವುದನ್ನು ನಿಲ್ಲಿಸಿ ಸತ್ಯ ತಿಳಿಯಲಿ ಎಂಬ ಉದ್ದೇಶದಿಂದ ಬಿಜೆಪಿಯ ಎಸ್‌ಸಿ ಮೋರ್ಚಾ ರಾಹುಲ್ ಗಾಂಧಿಯವರ ಚಿತ್ರವಿಟ್ಟು ಬುದ್ಧಿ ಶುದ್ಧಿ ಯಜ್ಞ ನೆರವೇರಿಸಿದೆ. ಅಲ್ಲದೆ, ರಾಜ್ಯದಾದ್ಯಂತ ಪ್ರತಿಭಟನೆ ನಡೆಸಿ ಪ್ರತಿ–ಕೃತಿ ದಹನ ಮಾಡಲಾಗಿದೆ. ಕಾಂಗ್ರೆಸ್ ಪಕ್ಷವು ರಾಜ್ಯಾದ್ಯಂತ ಬೃಹತ್ ಪ್ರತಿಭಟನೆಗಳ ಎಚ್ಚರಿಕೆ ನೀಡಿದ್ದು, ಮುಂಬರುವ ದಿನಗಳಲ್ಲಿ ಈ ವಿವಾದ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆಯಿದೆ.

## ಸೆ.10ರಂದು ಪಿಎಲ್‌ಡಿ ಬ್ಯಾಂಕ್ ಮಹಾಸಭೆ

ವಿಜಯ ದುಂಬಿ ಸುದ್ದಿ....

**ನೆಲಮಂಗಲ: ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ (ಪಿಎಲ್‌ಡಿ) ಬ್ಯಾಂಕ್‌ನ 2025–26ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಸೆ.10ರ ಗುರುವಾರ ಬೆಳಗ್ಗೆ 11 ಗಂಟೆಗೆ ನೆಲಮಂಗಲ ನಗರದ ಪವಾಡ ಶ್ರೀ ಬಸವಣ್ಣ ದೇವರ ಮಠದ ಸಭಾಂಗಣದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ಸಾದಿಕ್ ಪಾಷ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದ್ದು ಸರ್ವ ಸದಸ್ಯರು ಹಾಜರಾಗುವಂತೆ ಬ್ಯಾಂಕ್ ವ್ಯವಸ್ಥಾಪಕ ಜಿ.ಎಸ್ ಜಗದೀಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ಐಎಂಎಫ್ ಮುಖ್ಯಸ್ಥರೊಂದಿಗೆ ನಿರ್ಮಲಾ ಮಾತುಕತೆ

ವಿಜಯ ದುಂಬಿ ಸುದ್ದಿ....

**ವಾಷಿಂಗ್ಟನ್: ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಐಎಂಎಫ್ ವ್ಯವಸ್ಥಾಪಕ ನಿರ್ದೇಶಕಿ ಕ್ರಿಸ್ಟಲಿನಾ ಜಾರ್ಜಿವಾ ಅವರನ್ನು ಭೇಟಿ ಮಾಡಿ ಜಾಗತಿಕ ಆರ್ಥಿಕ ಮುನ್ನೋಟ ಮತ್ತು ಭಾರತದ ವಿಕಸನಗೊಳ್ಳುತ್ತಿರುವ ಬೆಳವಣಿಗೆಯ ಪಥದ ಕುರಿತು ಚರ್ಚಿಸಿದರು. ಆಶ್ವಿಲ್ಲೆಯಲ್ಲಿ ನಡೆದ ಜಿ20 ಹಣಕಾಸು ಮಂತ್ರಿಗಳು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ (ಎಫ್–ಎಂಸಿಬಿಜಿ) ಸಭೆಯ ಹೊರತಾಗಿ ಸೀತಾರಾಮನ್ ಜಾರ್ಜೀವಾ ಅವರನ್ನು ಭೇಟಿಯಾದರು.**



ಭಾರತದಲ್ಲಿ ನಡೆಯುತ್ತಿರುವ ರಚನಾತ್ಮಕ ಬದಲಾವಣೆಗಳು ಮತ್ತು ಸ್ಥೂಲ ಆರ್ಥಿಕ ಮೌಲ್ಯಮಾಪನಗಳು ಮತ್ತು ಬೆಳವಣಿಗೆಯ ಪ್ರಕ್ಷೇಪಗಳಲ್ಲಿ ಈ ಬೆಳವಣಿಗೆಗಳನ್ನು ಸೂಕ್ತವಾಗಿ ಪ್ರತಿಬಿಂಬಿಸುವ ಪ್ರಾಮುಖ್ಯತೆಯನ್ನು ಈ ಚರ್ಚೆಯು ಒಳಗೊಂಡಿತ್ತು ಎಂದು ಹಣ–ಕಾಸು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಭಾರತದ ಹಣಕಾಸು ಸಚಿವೆ ಅವರೊಂದಿಗೆ ಅತ್ಯುತ್ತಮ ಅಭಿಪ್ರಾಯ ವಿನಿಮಯ ಭಾರತದ ಅದ್ಭುತ ಬೆಳವಣಿಗೆಯ ಕಾರ್ಯಕ್ಷಮತೆ, ಜಾಗತಿಕ ಮುನ್ನೋಟ ಮತ್ತು ಹೆಚ್ಚು ಹೆಚ್ಚು ನಿಕಟವಾಗಿ ಒಟ್ಟಿಗೆ ಕೆಲಸ ಮಾಡುವ ನಮ್ಮ ಹಂಚಿಕೆಯ ಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ ಎಂದು ಜಾರ್ಜಿವಾ ಎಕ್?ಸನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಭಾರತದ ಬಲವಾದ ಆರ್ಥಿಕ ಸಾಧನೆ ಮತ್ತು ಟ್ರ್ಯಾಕ್ ರೆಕಾರ್ಡ್ ಅನ್ನು ಐಎಂ–ಎಫ್ ವ್ಯವಸ್ಥಾಪಕ ನಿರ್ದೇಶಕರು ಶ್ಲಾಘಿಸಿದರು, ಭಾರತೀಯ ಆರ್ಥಿಕತೆಯು ನಿರ್ಮಿಸಿದ ಶಕ್ತಿಯನ್ನು ಗಮನಿಸಿದರು ಎಂದು ಹಣ–ಕಾಸು ಸಚಿವಾಲಯದ ಹೇಳಿಕೆ ತಿಳಿಸಿದೆ. ಭಾರತದ ಬಲವಾದ ಸ್ಥೂಲ ಆರ್ಥಿಕ ಮೂಲಭೂತ ಅಂಶಗಳನ್ನು ಮತ್ತು ಉದಯೋನ್ಮುಖ ಮಾರುಕಟ್ಟೆ ಅಭಿವೃದ್ಧಿಶೀಲ ಆರ್ಥಿಕತೆಗಳಲ್ಲಿ ರಚನಾತ್ಮಕ ಬದಲಾವಣೆಗಳನ್ನು ಸಮರ್ಪಕವಾಗಿ ಪ್ರತಿಬಿಂಬಿಸುವ ದೃಢವಾದ, ಪುರಾವೆ ಆಧಾರಿತ ಕಣ್ಗಾವಲು ಚೌಕಟ್ಟುಗಳ ಪ್ರಾಮುಖ್ಯತೆಯನ್ನು ಹಣ–ಕಾಸು ಸಚಿವರು ಎತ್ತಿ ತೋರಿಸಿದರು.

ಸಾಂಸ್ಥಿಕ ಸಾಮರ್ಥ್ಯವನ್ನು ಬಲಪಡಿಸುವ ಬೆಂಬಲ, ಸ್ಥೂಲ ಆರ್ಥಿಕ ನೀತಿ ನಿರೂಪಣೆ ಮತ್ತು ಉದಯೋನ್ಮುಖ ಮಾರುಕಟ್ಟೆ ಅಭಿವೃದ್ಧಿಶೀಲ ಆರ್ಥಿಕತೆಗಳಲ್ಲಿ ಸಂಖ್ಯಾಶಾಸ್ತ್ರೀಯ ವ್ಯವಸ್ಥೆಗಳು ಸೇರಿದಂತೆ ನ ಸಾಮರ್ಥ್ಯ ಅಭಿವೃದ್ಧಿ ಉಪಕ್ರಮಗಳನ್ನು ಸಹ ಚರ್ಚೆಗಳು ಒಳಗೊಂಡಿವೆ. ವಿಶ್ಲೇಷಣಾತ್ಮಕ ಸಾಮರ್ಥ್ಯಗಳನ್ನು ಬಲಪಡಿಸುವಲ್ಲಿ, ಉತ್ತಮ ಸ್ಥೂಲ ಆರ್ಥಿಕ ನೀತಿಗಳನ್ನು ಬೆಂಬಲಿಸುವಲ್ಲಿ ಮತ್ತು ಜಾಗತಿಕ ಆರ್ಥಿಕ ಸ್ಥಿತಿಸ್ಥಾಪಕತ್ವಕ್ಕೆ ಕೊಡುಗೆ ನೀಡುವಲ್ಲಿ ಭಾರತ– ನಿರಂತರ ತೊಡಗಿಸಿಕೊಳ್ಳುವಿಕೆಯ ಮಹತ್ವವನ್ನು ಇಬ್ಬರೂ ನಾಯಕರು ಒತ್ತಿ ಹೇಳಿದರು.

# ತಮಿಳುನಾಡಿಗೆ ನೀರು : ಕಾವೇರಿ ನದಿ ಪಾತ್ರದ ಜಲಾಶಯಗಳ ನೀರಿನ ಸಂಗ್ರಹದಲ್ಲಿ ಇಳಿಕೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ತಮಿಳುನಾಡಿಗೆ ನಿತ್ಯ ನೀರು ಹರಿಸುತ್ತಿರುವ ಹಿನ್ನೆಲೆಯಲ್ಲಿ ಕಾವೇರಿ ನದಿ ಪಾತ್ರದ ಜಲಾಶಯಗಳ ನೀರಿನ ಸಂಗ್ರಹ ಗಣನೀಯವಾಗಿ ಇಳಿಕೆಯಾಗುತ್ತಿದೆ. ಜಲಾನಯನ ಭಾಗದಲ್ಲಿ ಮುಂಗಾರು ಮಳೆ ಮತ್ತೆ ಕೈಕೊಟ್ಟಿರುವ ಹಿನ್ನೆಯಲ್ಲಿ ಜಲಾಶಯದ ಒಳಹ–ರಿವಿನ ಪ್ರಮಾಣ ಕಡಿಮೆಯಾಗಿದ್ದು, ಹೊರ ಹ–ರಿವಿನ ಪ್ರಮಾಣ ಹೆಚ್ಚಾಗಿದೆ. ಸಿಡಬ್ಲ್ಯುಎಂಸಿ ಹಾಗೂ ಸಿಡಬ್ಲ್ಯುಎಂಎ ಆದೇಶದಂತೆ ನಿತ್ಯ 9 ಸಾವಿರ ಕ್ಯುಸೆಕ್?ಸ ನೀರನ್ನು ತಮಿಳುನಾಡಿಗೆ ಹರಿಸಬೇಕಿದೆ.**



ಕಳೆದ ವರ್ಷ ಇದೇ ಅವಧಿಯಲ್ಲಿ ಪೂರ್ಣ ಪ್ರಮಾಣದಲ್ಲಿ ಜಲಾಶಯಗಳ ಭರ್ತಿಯಾಗಿದ್ದು, ತಮಿಳುನಾಡಿಗೆ ನಿಗದಿತ ಪ್ರಮಾಣಕ್ಕಿಂತ ಹೆಚ್ಚು ನೀರು ಹರಿದು ಹೋಗಿ–ತ್ತು. ನೀರಿನ ಬಿಕ್ಕಟ್ಟು ಉಂಟಾಗಿರಲಿಲ್ಲ. ಪ್ರಸ್ತುತ ಮಳೆ ಕಡಿಮಯಾಗಿರುವುದರಿಂದ ಒಳಹರಿನ ಪ್ರಮಾಣ ಪ್ರತಿದಿನ ಕಡಿಮೆಯಾಗುತ್ತಿದೆ. ಕಾವೇರಿ ಜಲಾನಯನ ಭಾಗದ ನಾಲ್ಕು ಜಲಾಶಯಗಳಲ್ಲಿ ಶೇ.70ರಷ್ಟು ನೀರು ಸಂಗ್ರಹವಿದ್ದರೂ ತಮಿಳುನಾಡಿಗೆ ನಿತ್ಯ ನೀರು ಹರಿಸುತ್ತಿರುವುದ–ರಿಂದ ಜಲಾಶಯಗಳಲ್ಲಿ ಮತ್ತಷ್ಟು ನೀರು ಕಡಿಮೆಯಾಗಲಿರುವುದು ಆತಂಕಕ್ಕೆ ಕಾರಣವಾಗಿದೆ. ಸೆಪ್ಟೆಂಬರ್‌ನಲ್ಲಿ ಜಲಾಶಯಗಳು ಭರ್ತಿಯಾಗುವ ಪ್ರಮಾಣದಲ್ಲಿ ಮಳೆಯಾಗುವ ಸಾಧ್ಯತೆ ವಿರಳ.

ಹೀಗಾಗಿ ಜಲಾಶಯಗಳು ಪೂರ್ಣ ಪ್ರಮಾಣದಲ್ಲಿ ಜಲಾಶಯಗಳು ಭರ್ತಿಯಾಗುವ ಸಾಧ್ಯತೆಗಳು ಕ್ಷೀಣಿಸಿವೆ. ಇದರಿಂದ ಇರುವ ನೀರಿನ ಮಿತಬಳಕೆ ಮಾಡುವುದೊಂದೇ ಸದ್ಯಕ್ಕಿರುವ ಪರಿಹಾರ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ 124.80 ಅಡಿ ಗರಿಷ್ಠ ಸಾಮರ್ಥ್ಯದ ಕೆಆರ್‌ಎಸ್ ಜಲಾಶಯದಲ್ಲಿ 109.74 ಅಡಿಯಷ್ಟು ಮಾತ್ರ ನೀರಿದೆ. ಶೇ.64 ರಷ್ಟು ಮಾತ್ರ ಭರ್ತಿಯಾಗಿದೆ. ಈ ವರ್ಷ 110 ಅಡಿಯ ಗಡಿ ದಾಟಿತ್ತು. ಹೊರ ಹರಿವು ಹೆಚ್ಚಿಸಿದ ಪರಿಣಾಮ ನೀರಿನ ಸಂಗ್ರಹ ಕುಸಿಯುತ್ತಿದೆ. 4 ಸಾವಿರ ಕ್ಯುಸೆಕ್?ಸನಷ್ಟು ಒಳಹರಿವು ಇದ್ದು, 7 ಸಾವಿರ ಕ್ಯುಸೆಕ್?ಸಗೂ ಹೆಚ್ಚು ನೀರಿನ ಹೊರ ಹರಿವಿದೆ.

ಗರಿಷ್ಠ 8.50 ಟಿಎಂಸಿ ಸಾಮರ್ಥ್ಯದ ಹಾರಂಗಿ ಜಲಾಶಯದಲ್ಲಿ ಶೇ.98ರಷ್ಟು ನೀರು ಸಂಗ್ರಹವಾಗಿದೆ. ಒಳಹರಿವು ಮೂರು ಸಾವಿರ ಕ್ಯುಸೆಕ್?ಸಗಿಂತ ಕಡಿಮೆ ಇದ್ದು, ಅಷ್ಟೇ ಪ್ರಮಾಣದ ನೀರನ್ನು ಜಲಾಶಯದಿಂದ ಹೊರ ಬಿಡಲಾಗುತ್ತಿದೆ. 37.10 ಟಿಎಂಸಿ ಗರಿಷ್ಠ ಸಾಮರ್ಥ್ಯದ ಹೇಮಾವತಿ ಜಲಾಶಯದಲ್ಲಿ ಶೇ.77ರಷ್ಟು ನೀರು ಸಗ್ರಹವಾಗಿದೆ. ಪ್ರಸ್ತುತ 28.41 ಟಿಎಂಸಿ ನೀರಿದೆ. ನಾಲ್ಕೂವರೆ ಸಾವಿರ ಕ್ಯುಸೆಕ್?ಸ ಒಳಹರಿವು ಇದ್ದು, 8 ಸಾವಿರ ಕ್ಯುಸೆಕ್?ಸಗೂ ಹೆಚ್ಚು ಹೊರ ಹರಿವು ಇದೆ. ಕಬಿನಿ ಜಲಾಶಯದಲ್ಲಿ ಶೇ.60ರಷ್ಟು ಮಾತ್ರ ನೀರಿದೆ. 19.52 ಟಿಎಂಸಿ ಸಾಮಾರ್ಥ್ಯದ ಈ ಜಲಾಶಯ ಭರ್ತಿಯಾಗುವ ಹಂತ ತಲುಪಿತ್ತು.

ಆದರೆ, ತಮಿಳುನಾಡಿಗೆ ನಿರಂತರ ನೀರು ಹರಿಸುತ್ತಿರುವ ಹಿನ್ನೆಲೆಯಲ್ಲಿ ನೀರಿನ ಸಂಗ್ರಹ 11.79 ಟಿಎಂಸಿಗೆ ಕುಸಿದಿದೆ. ಮೂರು ಸಾವಿರ ಕ್ಯುಸೆಕ್?ಸನಷ್ಟು ಒಳಹರಿವು ಇದ್ದು, ಆರು ಸಾವಿರ ಕ್ಯುಸೆಕ್?ಸಗೂ ಅಧಿಕ ಪ್ರಮಾಣದ ನೀರಿನ ಹೊರ ಹರಿವು ಇದೆ. ಒಳಹರಿವಿಗಿಂತ ಹೊರ ಹರಿವು ಹೆಚ್ಚಾಗಿರುವುದ–ರಿಂದ ಜಲಾಶಯಗಳಲ್ಲಿ ನೀರಿನ ಸಂಗ್ರಹ ಏರಿಕೆಯಾಗುವ ಬದಲು ಇಳಿಕೆಯಾಗುತ್ತಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಈ ನಾಲ್ಕು ಜಲಾಶಯಗಳಿಂದ 113.27 ಟಿಎಂಸಿ ನೀರಿತ್ತು. ಈಗ 80 ಟಿಎಂಸಿ ನೀರು ಮಾತ್ರ ಇದ್ದು, 33 ಟಿಎಂಸಿಗೂ ಹೆಚ್ಚು ನೀರು ಕಡಿಮೆ ಸಂಗ್ರಹವಾಗಿದೆ.

# ನೀಟ್ ಪ್ರತಿಭಟನಾಕಾರರ ವಿರುದ್ಧದ ಎಫ್ಐಆರ್ ರದ್ದು, ಸೆ. 5ರ ಪ್ರತಿಭಟನೆ ಹಿಂಪಡೆದ CJP

ವಿಜಯ ದುಂಬಿ ಸುದ್ದಿ....

**ನವದೆಹಲಿ:** NEET-UG ಪ್ರತಿಭಟನೆಯ ಸಂದರ್ಭದಲ್ಲಿ ವಿದ್ಯಾರ್ಥಿ ಪ್ರತಿಭಟನಾಕಾರರ ವಿರುದ್ಧ ದಾಖಲಿಸಲಾದ ಈಐಖು ಕುರಿತು ಸುಪ್ರೀಂ ಕೋರ್ಟ್‌ನಲ್ಲಿ ನಡೆದ ಬೆಳವಣಿಗೆಗಳ ಹಿನ್ನೆಲೆಯಲ್ಲಿ, 'ಕಾಕ್ರೋಚ್ ಜನತಾ ಪಾರ್ಟಿ' (CJP)ಯು ನವದೆಹಲಿಯಲ್ಲಿ ಸೆಪ್ಟೆಂಬರ್ 5 ರಂದು ನಡೆಸಲು ಉದ್ದೇಶಿಸಿದ್ದ ಪ್ರತಿಭಟನಾ ಮೆರವಣಿಗೆಯನ್ನು ರದ್ದುಗೊಳಿಸಿದೆ.

ಇಂಡಿಯಾ ಗೇಟ್‌ನಿಂದ ದೆಹಲಿ ಪೊಲೀಸ್ ಪ್ರಧಾನ ಕಚೇರಿಯವರೆಗೆ ಪ್ರತಿಭಟನೆ ನಡೆಸುವ ತಮ್ಮ ನಿರ್ಧಾರವನ್ನು ಹಿಂಪಡೆದಿರುವುದಾಗಿ ಅಎಕ ಸಹ-ಸಂಯೋಜಕ ಸೌರವ್ ದಾಸ್ ಅವರು ಭಾರತದ ಮುಖ್ಯ ನ್ಯಾಯಮೂರ್ತಿ



ಸೂರ್ಯ ಕಾಂತ್ ನೇತೃತ್ವದ ಪೀಠಕ್ಕೆ ತಿಳಿಸಿದರು. ಜುಲೈ 20 ಮತ್ತು ಜುಲೈ 25 ರ ನಡುವೆ ದೇಶದ ವಿವಿಧ ಭಾಗಗಳಲ್ಲಿ ನಡೆದ ಪ್ರತಿಭಟನೆಗಳಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳ ವಿರುದ್ಧ ದಾಖಲಾದ ಈಐಖಗಳನ್ನು ಮುಚ್ಚಲು ಮತ್ತು ರದ್ದುಗೊಳಿಸಲು ಅನುಕೂಲ ಮಾಡಿಕೊಡುವಂತೆ ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ ನಂತರ ಈ ನಿರ್ಧಾರ ಹೊರಬಿದ್ದಿದೆ.

ದೆಹಲಿ, ಬಿಹಾರ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆಗಳಿಗೆ ಸಂಬಂಧಿಸಿದ ಹಲವಾರು ಈಐಖಗಳನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿತು. ಆದಾಗ್ಯೂ, ಗಂಭೀರ ಅಪರಾಧ ಕೃತ್ಯಗಳ ಆರೋಪಗಳನ್ನು ಒಳಗೊಂಡ ಪ್ರಕರಣಗಳಲ್ಲಿ ಸಾಮಾನ್ಯ ಕಾನೂನು ಪ್ರಕ್ರಿಯೆಯು ಮುಂದುವರಿಯಲು ನ್ಯಾಯಾಲಯ ಅವಕಾಶ ನೀಡಿತು. CJP ಪ್ರತಿನಿಧಿಗಳಿಗೆ ಈ ಹಿಂದೆ ನೀಡಿದ್ದ ಭರವಸೆಗಳನ್ನು ಈಡೇರಿಸುವುದಾಗಿ ಸರ್ಕಾರ ನೀಡಿದ ಭರವಸೆಗಳ ನಂತರ ಈ ಬೆಳವಣಿಗೆಗಳು ನಡೆದಿವೆ. ಈ ಭರವಸೆಗಳಲ್ಲಿ ಹಿಂದಿನ ಪ್ರತಿಭಟನೆಗಳ ಸಂದರ್ಭದಲ್ಲಿ ಸಂಕಷ್ಟಕ್ಕೀಡಾದ ಕುಟುಂಬಗಳಿಗೆ ಪರಿಹಾರ ಒದಗಿಸುವ ಕಾರ್ಯವಿಧಾನಗಳನ್ನು ರೂಪಿಸುವುದು ಸೇರಿದೆ. ಸರ್ಕಾರದ ಭರವಸೆಗಳು ಮತ್ತು ಈಐಖ ವಿಷಯದಲ್ಲಿ ನ್ಯಾಯಾಲಯದ ಮಧ್ಯಪ್ರವೇಶದ ನಂತರ, ಅಎಕ ತನ್ನ ಸೆಪ್ಟೆಂಬರ್ 5 ರ ಪ್ರತಿಭಟನಾ ಮೆರವಣಿಗೆಯನ್ನು ಹಿಂಪಡೆಯಲು ನಿರ್ಧರಿಸಿತು.

## ನದಿಗಳಲ್ಲಿ ಕೊಚ್ಚಿಕೊಂಡು ಬರುತ್ತಿರುವ ಮೀನುಗಳನ್ನು ಸೇವಿಸದಂತೆ ಎಚ್ಚರಿಕೆ, ಆದರೂ ಬಿಡದ ಜನ

ವಿಜಯ ದುಂಬಿ ಸುದ್ದಿ....

**ಬಿಹಾರ: ನೇಪಾಳದಿಂದ ಹರಿದುಬಂದ ಪ್ರವಾಹದ ನೀರಿನೊಂದಿಗೆ ಬಿಹಾರದ ವಿವಿಧ ಭಾಗಗಳಿಗೆ ಕೊಚ್ಚಿ ಬರುತ್ತಿರುವ ಅಸಾಮಾನ್ಯವಾಗಿ ಕಾಣುವ ಮೀನುಗಳನ್ನು ತಿನ್ನುವುದನ್ನು, ಖರೀದಿಸುವುದನ್ನು ಅಥವಾ ಮಾರಾಟ ಮಾಡುವುದನ್ನು ತಪ್ಪಿಸುವಂತೆ ಬಿಹಾರ ಸರ್ಕಾರವು ಆರೋಗ್ಯ ಸಲಹೆ ಹೊರಡಿಸಿದೆ. ಅಂತಹ ಮೀನುಗಳನ್ನು ಸೇವಿಸಿದ ನಂತರ ಕೆಲವರು ಅಸ್ವಸ್ಥಗೊಂಡಿದ್ದಾರೆ ಎಂಬ ವರದಿಗಳ ಹಿನ್ನೆಲೆಯಲ್ಲಿ, ಹೈನುಗಾರಿಕೆ, ಮೀನುಗಾರಿಕೆ ಮತ್ತು ಪಶು ಸಂಪನ್ಮೂಲ ಇಲಾಖೆಯ ಮೀನುಗಾರಿಕೆ ವಿಭಾಗವು ಸೋಮವಾರ ಈ ಸಲಹೆಯನ್ನು ನೀಡಿದೆ.**



ಪ್ರವಾಹದ ನೀರು ಕೆರೆಗಳು, ನದಿಗಳು, ಸರೋವರಗಳು ಮತ್ತು ಇತರ ಜಲಮೂಲಗಳಿಂದ ಮೀನುಗಳನ್ನು ಕೊಚ್ಚಿಕೊಂಡು ಹೋಗಿ ದೂರದ ಸ್ಥಳಗಳಿಗೆ ಸಾಗಿಸಬಲ್ಲದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಪ್ರಕ್ರಿಯೆಯಲ್ಲಿ, ಮೀನುಗಳು ಕಲುಷಿತ ಚರಂಡಿಗಳು, ಸತ್ತ ಪ್ರಾಣಿಗಳು ಮತ್ತು ಇತರ ಕಲುಷಿತ ವಸ್ತುಗಳ ಸಂಪರ್ಕಕ್ಕೆ ಬರಬಹುದು; ಇದರಿಂದಾಗಿ ಅವು ಬ್ಯಾಕ್ಟೀರಿಯಾ, ವೈರಸ್ ಮತ್ತು ಶಿಲೀಂಧ್ರಗಳ (ಫಂಗೈ) ಸೋಂಕಿಗೆ ಒಳಗಾಗುವ ಅಪಾಯ ಹೆಚ್ಚುತ್ತದೆ. ಸಂಬಂಧಪಟ್ಟ ಅಧಿಕಾರಿಗಳಿಂದ ಸರಿಯಾಗಿ ಗುರುತಿಸಲ್ಪಟ್ಟು ಮತ್ತು ಬಳಕೆಗೆ ಸುರಕ್ಷಿತವೆಂದು ದೃಢೀಕರಿಸಲ್ಪಡದ ಹೊರತು, ಅಪರಿಚಿತ ಮೀನುಗಳನ್ನು ಸೇವನೆಗೆ ಸುರಕ್ಷಿತವೆಂದು ಪರಿಗಣಿಸದಂತೆ ಇಲಾಖೆಯು ಸಾರ್ವಜನಿಕರಿಗೆ ಮನವಿ ಮಾಡಿದೆ. ಪ್ರವಾಹದ ನೀರಿನಿಂದ ನೇರವಾಗಿ ಹಿಡಿದ ಮೀನುಗಳನ್ನು ಸೇವಿಸದಂತೆ ಹಾಗೂ ಗುರುತು ತಿಳಿಯದ ಬಗೆಯ ಮೀನುಗಳನ್ನು ಖರೀದಿಸಿ ಮಾರಾಟ ಮಾಡದಂತೆ ನಿವಾಸಿಗಳಿಗೆ ನಿರ್ದಿಷ್ಟವಾಗಿ ಸೂಚಿಸಲಾಗಿದೆ. ಅಂತಹ ಮೀನುಗಳನ್ನು ಸೇವಿಸಿದ ನಂತರ ವಾಂತಿ, ಅತಿಸಾರ, ಹೊಟ್ಟೆ ನೋವು, ತಲೆತಿರುಗುವಿಕೆ ಅಥವಾ ಉಸಿರಾಟದ ತೊಂದರೆಯಂತಹ ಲಕ್ಷಣಗಳು ಕಂಡುಬಂದರೆ, ತಕ್ಷಣವೇ ಹತ್ತಿರದ ಆರೋಗ್ಯ ಕೇಂದ್ರ ಅಥವಾ ಆಸ್ಪತ್ರೆಯಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಲಾಗಿದೆ. ಅಲ್ಲದೆ, ಅಸಾಮಾನ್ಯ ಬಗೆಯ ಮೀನುಗಳು ಕಂಡುಬಂದಲ್ಲಿ ಆ ಬಗ್ಗೆ ತಮ್ಮ ಜಿಲ್ಲಾ ಮೀನುಗಾರಿಕಾ ಅಧಿಕಾರಿ ಅಥವಾ ಸ್ಥಳೀಯ ಆಡಳಿತಕ್ಕೆ ಮಾಹಿತಿ ನೀಡುವಂತೆಯೂ ನಿವಾಸಿಗಳಿಗೆ ಸೂಚಿಸಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ವದಂತಿಗಳನ್ನು ನಂಬದಂತೆ ಮತ್ತು ಸುರಕ್ಷತೆಗೆ ಆದ್ಯತೆ ನೀಡುವಂತೆ ಇಲಾಖೆಯು ಸಾರ್ವಜನಿಕರನ್ನು ಕೋರಿದೆ.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಸೆ.05 ರಂದು ಪ್ರಜಾ ಸೇವಾ ಆಂದೋಲನಕ್ಕೆ ಚಾಲನೆ

## ಪ್ರಜಾ ಸೇವಾ ಆಂದೋಲದಲ್ಲಿ ಸಾರ್ವಜನಿಕರು ಅಹವಾಲು ಸಲ್ಲಿಸಿ: ಡಿಸಿ

ವಿಜಯ ದುಂಬಿ ಸುದ್ದಿ....

**ಬೆಂ.ಗ್ರಾ ಜಿಲ್ಲೆ: ಸೆಪ್ಟೆಂಬರ್ 05 ರಂದು ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪಟ್ಟಣದ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಮೊದಲ ಪ್ರಜಾ ಸೇವಾ ಆಂದೋಲನ ಸಭೆ ಆಯೋಜಿಸಲಾಗಿದ್ದು ಸಾರ್ವಜನಿಕರು ತಮ್ಮ ಕುಂದು ಕೊರತೆಗಳ ಅಹವಾಲುಗಳನ್ನು ಸ್ಥಳಕ್ಕೆ ಬಂದು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕೆ.ಎನ್ ಅನುರಾಧ ತಿಳಿಸಿದರು.**

ದೇವನಹಳ್ಳಿ ಟೌನ್ ನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪ್ರಜಾ ಸೇವಾ ಆಂದೋಲನದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿ ಪ್ರಜಾ ಸೇವಾ ಇಲಾಖೆಯು ಜನರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ, ಸರ್ಕಾರದ ವಿನೂತನ ಕಾರ್ಯಕ್ರಮವಾದ ಪ್ರಜಾ ಸೇವಾ ಜನಾಂದೋಲನ ಸಭೆಯನ್ನು ಪ್ರತಿ ಶನಿವಾರ ಪ್ರತಿ ತಾಲ್ಲೂಕಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗುತ್ತಿದೆ. ಜೊತೆಗೆ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಹೋಬಳಿ ಮಟ್ಟದಲ್ಲಿ ನಡೆಸಲಾಗುವುದು.

ಇದರ ಭಾಗವಾಗಿ ಸೆಪ್ಟೆಂಬರ್ 05 ರಂದು ಶನಿವಾರ ಮೊದಲ ಪ್ರಜಾ ಸೇವಾ



ಆಂದೋಲನ ಸಭೆಯನ್ನು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ವಿಜಯಪುರ ಪಟ್ಟಣದ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಮಧ್ಯಾಹ್ನ 12.30 ಗಂಟೆಗೆ ಆಯೋಜಿಸಲಾಗಿದೆ. ಸಾರ್ವಜನಿಕರ ಮನೆಬಾಗಿಲಿಗೆ ಮುಖ್ಯಮಂತ್ರಿಗಳ ಸಂದೇಶ ಪತ್ರ, ಕುಂದುಕೊರತೆ ಅರ್ಜಿ ನಮೂನೆ ವಿತರಿಸಲು ಪಿಡಿಒ ಸೇರಿದಂತೆ ಸ್ಥಳೀಯ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸಾರ್ವಜನಿಕರು ಅರ್ಜಿ ನಮೂನೆ ಪಡೆದು ಯಾವ ಇಲಾಖೆಗೆ ಸಂಬಂಧಿಸಿದ ಸೌಲಭ್ಯ, ಅಹವಾಲು ಇದೆ ಎಂಬುದನ್ನು ಭರ್ತಿ ಮಾಡಿ ಕೌಂಟರ್ ಗಳಲ್ಲಿ ನೀಡಬೇಕು ಸ್ಥಳದಲ್ಲಿ ಪರಿಹರಿಸುವ ಅಹವಾಲುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಮೂಲಕ ಪರಿಹರಿಸಲಾಗುವುದು, ಉಳಿದ ಅರ್ಜಿಗಳನ್ನು ಸ್ವೀಕರಿಸಿ, ಸ್ವೀಕೃತಿ ಕಾಪಿ ಅರ್ಜಿದಾರರಿಗೆ ನೀಡಲಾಗುವುದು.

ಪಿಂಚಣಿ ಸೇವೆ, ಸಂಧ್ಯಾ ಸುರಕ್ಷಾ ಮತ್ತು ವಿಧವಾ ವೇತನ, ವಿಶೇಷ ಚೇತನರ ಯೋಜನೆಗಳು, ಕಂದಾಯ ಸಮಸ್ಯೆಗಳು, ಗ್ಯಾರಂಟಿ ಯೋಜನೆಗಳ ಸೌಲಭ್ಯ, ಹೊಸ ಪಡಿತರ ಚೀಟಿ, ರಸ್ತೆ, ಕುಡಿಯುವ ನೀರು, ಸರ್ಕಾರಿ ಶಾಲೆ ಹಾಗೂ ಅಂಗನವಾಡಿ ಅಭಿವೃದ್ಧಿ,,ಪೊಲೀಸ್ ಇಲಾಖೆ ಸೇವೆ, ನೀರಾವರಿ ಯೋಜನೆ ಸೇರಿದಂತೆ ಹತ್ತು ಹಲವು ಯೋಜನೆಗಳು ಹಾಗೂ ಸಮಸ್ಯೆಗಳಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಂಬಂಧಿಸಿದ ಇಲಾಖೆಗಳ ಸಹಕಾರದೊಂದಿಗೆ ಪರಿಹಾರ ಒದಗಿಸಲಾಗುತ್ತಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸ್ಥಳದಲ್ಲೇ ಹಾಜರಿದ್ದು ಜನಸಾಮಾನ್ಯರ ಅಹಾವಾಲುಗಳನ್ನು ಆಲಿಸಲಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಪ್ರಜಾಸೇವೆ ಆಂದೋಲನ ಸಭೆಯಲ್ಲಿ ಅರ್ಜಿ ಸ್ವೀಕೃತಿಗೆ ಕೌಂಟರಗಳನ್ನು ಸ್ಥಾಪಿಸಲು, ಸರ್ಕಾರದ ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಪ್ರಮಾಣ ಪತ್ರ, ಆದೇಶ ಪತ್ರವನ್ನು ಸ್ಥಳದಲ್ಲಿ ವಿತರಿಸಲು, ಜನಸಾಮಾನ್ಯರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಸೇರಿದಂತೆ ಆಗತ್ಯ ಕ್ರಮ ಕೈಗೊಳ್ಳಲು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು. ಸಭೆಯಲ್ಲಿ ಸಿಇಒ ಡಾ.ವಾಸಂತಿ ಅಮರ್, ಎಸಿ ಮಂಜುನಾಥ್, ಸಿಪಿಒ ರಾಮಕೃಷ್ಣ, ದೇವನಹಳ್ಳಿ ಇಒ ಮುನಿರಾಜು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಆಗಸ್ಟ್ 15 ರಿಂದ ಸೆಪ್ಟೆಂಬರ್ 15 ರವರೆಗೂ ತಾಲ್ಲೂಕಿನಲ್ಲಿ ಜಾಬ್ ಕಾರ್ಡ್ ಮೇಳ

ವಿಜಯ ದುಂಬಿ ಸುದ್ದಿ....

**ಶಿಡ್ಲಘಟ್ಟ: ಆಗಸ್ಟ್ 15 ರಿಂದ ಸೆಪ್ಟೆಂಬರ್ 15 ರವರೆಗೂ ತಾಲ್ಲೂಕಿನಲ್ಲಿ ಜಾಬ್ ಕಾರ್ಡ್ ಮೇಳ ಮಾಡುವ ಉದ್ದೇಶದಿಂದ ಬುಧವಾರದಂದು ಮಳ್ಳೂರು & ಹಂಡಿಗನಾಳ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ, ಗ್ರಾಮೀಣ ಕುಟುಂಬ ನೊಂದಣಿ ಮತ್ತು ಗ್ರಾಮೀಣ ರೋಜ್ಗಾರ್ ಗ್ಯಾರಂಟಿ ಕಾರ್ಡ್ ಅರ್ಜಿಗಳನ್ನು ನಮೂನೆ ಯನ್ನು ಗ್ರಾಮ ಪಂಚಾಯಿತಿಗಳಿಗೆ ವಿತರಿಸಲಾಯಿತು.**

ಗ್ರಾಮದಲ್ಲಿ VB-G- RAM -G ಯೋಜನೆ ವಿಕಸಿತ ಭಾರತ್ ಗ್ಯಾರೆಂಟಿ ಫಾರ್ ರೋಜಗಾರ್ ಆಯಂಡ್ ಅಜೀವಿಕ್ ಮಿಷನ್ (ಗ್ರಾಮೀಣ) ಯೋಜನೆಯಲ್ಲಿ ಜಾಬ್ ಕಾರ್ಡ್ ಮೇಳದ ಅಭಿಯಾನದಡಿಯಲ್ಲಿ ಗ್ರಾಮದ ಮನೆ ಮನೆಗೆ ಭೇಟಿ ನೀಡಿ ನಮೂನೆ-1 ರ ಬಗ್ಗೆ ಮಾಹಿತಿ ನೀಡಿದರು. ಅದೇ ರೀತಿಯಾಗಿ VBGRAMG ಬಗ್ಗೆ ಮಾಹಿತಿ ನೀಡಿ ಕೆಲಸಕ್ಕೆ ಅರ್ಜಿ ಸಲ್ಲಿಸಲು ಹಾಗೂ ಹೊಸ ಜಾಬ್ ಕಾರ್ಡ್ ತೆಗೆದುಕೊಳ್ಳಲು ಅಗತ್ಯ ದಾಖಲಾತಿಗಳ ಬಗ್ಗೆ ಮಾಹಿತಿ ಕೂಡ ನೀಡಲಾಯಿತು.



ಈ ಸಂದರ್ಭದಲ್ಲಿ ಮಳ್ಳೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾದ ಸೌಮ್ಯ & ಹಂಡಿಗನಾಳ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾದ ಮಧು, ಟಿಐಇಸಿ ಲೋಕೇಶ, ಕಾರ್ಯದರ್ಶಿಯವರು, ಮಳ್ಳೂರು & ಹಂಡಿಗನಾಳ ಗ್ರಾಮ ಪಂಚಾಯಿತಿ ಸಿಬ್ಬಂದಿ ಸೇರಿದಂತೆ ಇತರರು ಹಾಜರಿದ್ದರು.

# ಜನರ ಮನೆಬಾಗಿಲಿಗೆ ಸರ್ಕಾರಿ ಸೇವೆ: ಸೆ 05 ರಿಂದ 'ಪ್ರಜಾಸೇವಾ' ಆಂದೋಲನ

## ಸರ್ಕಾರಿ ಸೌಲಭ್ಯ ಕಟ್ಟಕಡೆಯ ವ್ಯಕ್ತಿಗೂ ಸಿಗಲಿ: ತಹಶೀಲ್ದಾರ್ ಗಗನ ಸಿಂಧು

ವಿಜಯ ದುಂಬಿ ಸುದ್ದಿ....

**ಶಿಡ್ಲಘಟ್ಟ: ಸಾರ್ವಜನಿಕರು ತಮ್ಮ ವಿವಿಧ ಸರ್ಕಾರಿ ಕೆಲಸಗಳು ಹಾಗೂ ಕುಂದುಕೊರತೆಗಳ ಪರಿಹಾರಕ್ಕಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಸರ್ಕಾರದ ಯೋಜನಾ ಸೌಲಭ್ಯಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನೇರವಾಗಿ ತಲುಪಿಸುವ ಉದ್ದೇಶದಿಂದ 'ಪ್ರಜಾಸೇವಾ ಆಂದೋಲನ' ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ಗಗನ ಸಿಂಧು ತಿಳಿಸಿದ್ದಾರೆ.**

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ತಾಲೂಕಿನಲ್ಲಿ ಪ್ರಜಾಸೇವಾ ಆಂದೋಲನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

ಸೆ. 5ಕ್ಕೆ ಸಾದಲಿಯಲ್ಲಿ ಮೊದಲ ಶಿಬಿರ: ತಾಲೂಕಿನ ಸಾದಲಿ ಹೋಬಳಿಯ ಕೆಪಿಎಸ್ ಶಾಲೆಯಲ್ಲಿ ಸೆಪ್ಟೆಂಬರ್ 5ರಂದು ಮೊದಲ 'ಪ್ರಜಾಸೇವಾ



ಆಂದೋಲನ' ನಡೆಯಲಿದೆ. ಇನ್ಮುಂದೆ ಪ್ರತಿ ಶನಿವಾರ ಹೋಬಳಿವಾರು ಹಂತದಲ್ಲಿ ಈ ಕಾರ್ಯಕ್ರಮ ಮುಂದುವರಿಯಲಿದೆ.

ಸ್ಥಳದಲ್ಲೇ ಸಮಸ್ಯೆ ವಿಲೇವಾರಿ: ಈ ಆಂದೋಲನದಲ್ಲಿ ತಾಲೂಕು ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಲಿದ್ದಾರೆ. ಸಾರ್ವಜನಿಕರಿಂದ ಸ್ಥಳದಲ್ಲೇ ಅರ್ಜಿಗಳನ್ನು ಸ್ವೀಕರಿಸಿ, ಸಾಧ್ಯವಾದಷ್ಟು ದೂರುಗಳನ್ನು ತಕ್ಷಣವೇ ವಿಲೇವಾರಿ ಮಾಡಲು ಸೂಚಿಸಲಾಗಿದೆ.

ಸಾರ್ವಜನಿಕರ ಅನುಕೂಲಕ್ಕಾಗಿ ಕಾರ್ಯಕ್ರಮಕ್ಕೂ ಮುನ್ನವೇ ಪೂರ್ವಮುದ್ರಿತ ಅರ್ಜಿ ನಮೂನೆಗಳು ಹಾಗೂ ಅಗತ್ಯ ದಾಖಲೆಗಳ ವಿವರಗಳನ್ನು ಮನೆ-ಮನೆಗೆ ತಲುಪಿಸಲಾಗುತ್ತಿದೆ. ಅರ್ಹತೆ ಇದ್ದರೂ ಮಾಹಿತಿ ಕೊರತೆ, ದಾಖಲೆಗಳ ಕೊರತೆಯಿಂದ ಸೌಲಭ್ಯಗಳಿಂದ ವಂಚಿತರಾದ ವೃದ್ಧರು, ಮಹಿಳೆಯರು, ರೈತರು ಹಾಗೂ ಕೂಲಿ ಕಾರ್ಮಿಕರನ್ನು ಗುರುತಿಸಿ ಅರ್ಜಿ ಸಲ್ಲಿಸಲು ನೆರವಾಗುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ತಾಲೂಕಿನ ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಸಂಬಂಧಿಸಿದ ಅಗತ್ಯ ದಾಖಲೆಗಳೊಂದಿಗೆ ಈ ಆಂದೋಲನದಲ್ಲಿ ಭಾಗವಹಿಸಿ, ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕಾಗಿ ತಹಶೀಲ್ದಾರ್ ಮನವಿ ಮಾಡಿದ್ದಾರೆ.

# ಕೆಪಿಎಸ್‌ಸಿ ಅಕ್ರಮ : ಖುದ್ದು ಪ್ರಶ್ನೆ ಬರೆದು ಓಎಂಆರ್ ತಿದ್ದುತ್ತಿದ್ದ ಜ್ಞಾನೇಂದ್ರ..!

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನಡೆದ ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ನಡೆದಿರುವ ಕೋಟ್ಯಂತರ ರೂ.ಗಳ ಅಕ್ರಮದ ತನಿಖೆಯಲ್ಲಿ 400 ಹುದ್ದೆಗಳ ಭಾರಿ ಅಕ್ರಮದ ಇಡೀ ಜಾಲವು ಅತ್ಯಂತ ವ್ಯವಸ್ಥಿತವಾಗಿ, ಚಲನಚಿತ್ರದ ದೃಶ್ಯಗಳಂತೆ (ಫಿಲಿ ಸ್ಟೈಲ್) ಕಾರ್ಯನಿರ್ವಹಿಸಿರುವುದು ಅಪರಾಧ ತನಿಖಾ ದಳದ ತನಿಖೆಯಿಂದ ಹೊರಬಿದ್ದಿದೆ.**

ಪ್ರಕರಣದ ಪ್ರಮುಖ ಆರೋಪಿಯಾಗಿರುವ ಕೆಪಿಎಸ್‌ಸಿ ಮಾಜಿ ಪರೀಕ್ಷಾ ನಿಯಂತ್ರಕ ಹಾಗೂ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗಾವರ್ ಮತ್ತು ಪ್ರಮುಖ ಮಧ್ಯವರ್ತಿ ಬಸವರಾಜ್ ಕನ್ನಾಳೆ ಅವರನ್ನು ಈಗಾಗಲೇ ಸಿಐಡಿ ಅಧಿಕಾರಿಗಳು ಬಂಧಿಸಿದ್ದು, ತನಿಖೆಯಲ್ಲಿ ಸ್ಫೋಟಕ ಮಾಹಿತಿಗಳು ಬಹಿರಂಗಗೊಂಡಿವೆ. ಮೂರು ಹಂತ: ಮೊದಲ ಹಂತ –ಪ್ರಶ್ನೆ ಪತ್ರಿಕೆ ಸೋರಿಕೆ: ಪರೀಕ್ಷೆಗೂ ಮುಂಚಿತವಾಗಿ ಸಿದ್ಧಪಡಿಸುತ್ತಿದ್ದ 5 ಮಾದರಿ ಪ್ರಶ್ನೆ ಪತ್ರಿಕೆಗಳ ಪೈಕಿ ಅಂತಿಮಗೊಳ್ಳುತ್ತಿದ್ದ ಪ್ರಶ್ನೆಗಳನ್ನು ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಸ್ವತಃ ತನ್ನ ಕೈಯಿಂದ ಬರೆದುಕೊಳ್ಳುತ್ತಿದ್ದರು.

ಪರೀಕ್ಷೆಗೆ ಕೇವಲ ಎರಡು ದಿನಗಳು ಬಾಕಿ ಇರುವಾಗ ಈ ಅತಿಮುಖ್ಯ ಪ್ರಶ್ನೆ ಪತ್ರಿಕೆಯನ್ನು ಮಧ್ಯವರ್ತಿ ಬಸವರಾಜ್‌ಗೆ ತಲುಪಿಸಲಾಗುತ್ತಿತ್ತು. ರಾಜಾಜಿನಗರದ ಕಚೇರಿಯಲ್ಲಿ ಆಕಾಂಕ್ಷಿಗಳೊಂದಿಗೆ ಲಕ್ಷಾಂತರ ರೂ.ಗಳಿಗೆ (ಪ್ರತಿ ಹುದ್ದೆಗೆ ಅಂದಾಜು 40 ಲಕ್ಷ ರೂ.) ಡೀಲ್ ಕುದುರಿಸುತ್ತಿದ್ದ ಬಸವರಾಜ್, ಆ ಅಭ್ಯರ್ಥಿಗಳನ್ನು ಬೆಂಗಳೂರು, ತುಮಕೂರು ಹಾಗೂ ಆಂಧ್ರಪ್ರದೇಶದ ನಾನಾ ರೆಸಾರ್ಟ್‌ಗಳಲ್ಲಿ ರಹಸ್ಯವಾಗಿ ಕೂಡಿಹಾಕಿ ಉತ್ತರ ಬರೆಯಲು ತರಬೇತಿ ಕೊಡಿಸುತ್ತಿದ್ದ. ಬಳಿಕ ಅವರನ್ನು ಖಾಸಗಿ ಬಸ್‌ಗಳಲ್ಲಿ ಪರೀಕ್ಷಾ ಕೇಂದ್ರಗಳಿಗೆ ಕರೆತರುತ್ತಿದ್ದ. ಎರಡನೇ ಹಂತ–ಓಎಂಆರ್ ಶೀಟ್ ಕರಡು ತಿದ್ದುಪಡಿ– ಪರೀಕ್ಷೆಯಲ್ಲಿ ಯಾವುದೇ ಆತಂಕವಿಲ್ಲದೆ ಬರೆಯಲು ಸಾಧ್ಯವಾಗದ ಅಥವಾ ಅಂಕ ಕಡಿಮೆ ಪಡೆಯುವ ನಿರೀಕ್ಷೆಯಿದ್ದ ಅಭ್ಯರ್ಥಿಗಳ ಓಎಂಆರ್‌ಶೀಟ್‌ಗಳನ್ನು ಪರೀಕ್ಷಾ ನಿಯಂತ್ರಕ



ಜ್ಞಾನೇಂದ್ರ ಕುಮಾರ್ ಅವರೇ ನೇರವಾಗಿ ಕಚೇ–ರಿಯಲ್ಲಿ ತಿದ್ದಿ, ಅವರಿಗೆ ಉನ್ನತ ಮೆರಿಟ್ ಬರುವಂತೆ ಅಂಕಗಳನ್ನು ಕೃತಕವಾಗಿ ಹೆಚ್ಚಿಸುತ್ತಿದ್ದರು.

ಮೂರನೇ ಹಂತ –ಸಂದರ್ಶನ ಮತ್ತು ಅಂತಿಮ ನೇಮಕಾತಿ–1:3 ಅನುಪಾತದಲ್ಲಿ ಕೆಪಿ–ಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಅವರ ಮುಂದೆ ಹಾಜರಾಗುತ್ತಿದ್ದ ಅಭ್ಯರ್ಥಿಗಳ ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನದ ಅಂಕಗಳನ್ನು ಪರಸ್ಪರ ಮ್ಯಾಚ್ ಮಾಡಿ, ಅಂತಿಮವಾಗಿ ಯಾವುದೇ ಅಡೆತಡೆಯಿಲ್ಲದೆ ಅಕ್ರಮ ನೇಮಕಾತಿ ಆದೇಶಗಳನ್ನು ಕೊಡಿಸಲಾಗುತ್ತಿತ್ತು. ಕನ್ನಾಳೆ ಮನೆಯಲ್ಲಿ ಹಾಲ್ ಟಿಕೆಟ್ ಜಪ್ತಿ: ಮಧ್ಯವರ್ತಿ ಬಸವರಾಜ್ ಕನ್ನಾಳೆ ನಿವಾಸದ ಮೇಲೆ ಸಿಐಡಿ ಅಧಿಕಾರಿಗಳು ನಡೆಸಿದ ದಾಳಿ ಮತ್ತು ಶೋಧದ ವೇಳೆ ಮತ್ತಷ್ಟು ಸ್ಫೋಟಕ ಸಾಕ್ಷ್ಯಗಳು ಲಭಿಸಿವೆ. ಪಶುವೈದ್ಯಾಧಿಕಾರಿ ಪರೀಕ್ಷೆ ಮಾತ್ರವಲ್ಲದೆ, ಇತರೆ ಸ್ಪರ್ಧಾತಕ ಪರೀಕ್ಷೆಗಳಿಗೂ ಈ ಜಾಲವು ಕೈಹಾಕಿರುವುದು ದೃಢಪಟ್ಟಿದೆ. ಕನ್ನಾಳೆ ಮನೆಯಿಂದ 2025ರಲ್ಲಿ ನಡೆದ ಬಿ ಗ್ರೂಪ್ ಹುದ್ದೆಗಳ ನೇಮಕಾತಿ ಪರೀಕ್ಷೆಗೆ ಹಾಜರಾಗಿದ್ದ 6 ಅಭ್ಯರ್ಥಿಗಳ ಪ್ರವೇಶಪತ್ರಗಳು ಜಪ್ತಿಯಾಗಿವೆ. ಈ ಹಿನ್ನೆಲೆಯಲ್ಲಿ ಆ 6 ಜನ ಅಭ್ಯರ್ಥಿಗಳಿಗೂ ಸಿಐಡಿ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಲಾಗಿದೆ.

40 ಲಕ್ಷದಿಂದ 80 ಲಕ್ಷದವರೆಗೆ ಡೀಲ್: ತನಿಖೆಯಲ್ಲಿ ಪ್ರತಿ ಅಭ್ಯರ್ಥಿಯಿಂದ ಹುದ್ದೆಗೆ ಅನುಗುಣವಾಗಿ 40 ಲಕ್ಷದಿಂದ 80 ಲಕ್ಷದವರೆಗೆ ಹಣ ಪಡೆಯಲಾಗುತ್ತಿತ್ತು ಎಂಬ ಆರೋಪಗಳು ಹೊರಬಿದ್ದಿವೆ. ಕೆಲ ಅಭ್ಯರ್ಥಿಗಳು ಹಣ ಪಾವತಿಸಿ ಅಕ್ರಮ ಮಾರ್ಗದ ಮೂಲಕ ಪರೀಕ್ಷೆಗೆ ಹಾಜರಾಗಿದ್ದೇವೆ ಎಂದು ಸಿಐಡಿ ಮುಂದೆ ಹೇಳಿಕೆ ನೀಡಿದ್ದಾರೆ. ಕೆಲ ಅಭ್ಯರ್ಥಿಗಳು ಇದೀಗ ತನಿಖೆಗೆ ಸಹಕರಿಸಲು ಮುಂದಾಗಿದ್ದು, ತಮ ಹೇಳಿಕೆಗಳನ್ನು ದಾಖಲಿಸಿಕೊಂಡಿರುವುದಾಗಿ ವರದಿಗಳು ತಿಳಿಸಿವೆ. ಈ ಹೇಳಿಕೆಗಳು ಪ್ರಕರಣದ ಹಣದ ವ್ಯವಹಾರ, ಪ್ರಶ್ನೆಪತ್ರಿಕೆ ಸೋರಿಕೆಯ ಮೂಲ ಮತ್ತು ಮಧ್ಯವರ್ತಿಗಳ ಜಾಲದ ಬಗ್ಗೆ ಹೆಚ್ಚಿನ ಸುಳಿವು ನೀಡುವ ಸಾಧ್ಯತೆ ಇದೆ.

ರೆಸಾರ್ಟ್‌ಗಳಲ್ಲಿ ಸ್ಪೆಷಲ್ ಪರೀಕ್ಷೆ?: ಈ ಪ್ರಕರಣದ ಅತ್ಯಂತ ಗಂಭೀರ ಅಂಶಗಳಲ್ಲಿ ಒಂದಾಗಿ ರಹಸ್ಯ ಸ್ಥಳಗಳಲ್ಲಿ ಅಭ್ಯರ್ಥಿಗಳನ್ನು ಇರಿಸಿ ಪರೀಕ್ಷೆಗೆ ಸಿದ್ಧಪಡಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಸಿಐಡಿ ತನಿಖೆಯ ಪ್ರಕಾರ, ಹಣ ಪಾವತಿಸಿದ್ದರೆಂದು ಶಂಕಿಸಲಾದ ಕೆಲವು ಅಭ್ಯರ್ಥಿಗಳನ್ನು ಬೆಂಗಳೂ–ರಿನ ಡೇವಣಹಳ್ಳಿ ಪ್ರದೇಶ, ತುಮಕೂರಿನ ದೇವರಾಯನದುರ್ಗ ಹಾಗೂ ಆಂಧ್ರಪ್ರದೇಶದ ಸ್ಥಳಗಳಿಗೆ ಕರೆದೊಯ್ಯಲಾಗಿತ್ತು ಎಂಬ ಮಾಹಿತಿ ಹೊರಬಂದಿದೆ. ಅಲ್ಲಿ ಅವರಿಗೆ ತರಬೇತಿ ನೀಡಲಾಗಿತ್ತು ಮತ್ತು ನಂತರ ಪರೀಕ್ಷಾ ಕೇಂದ್ರಗಳಿಗೆ ಕರೆದೊಯ್ಯಲಾಗುತ್ತಿತ್ತು ಎಂದು ವರದಿಯಾಗಿದೆ.

## ಡಿಗ್ರಿಯಲ್ಲಿ 5 ವಿಷಯ ಫೇಲ್, ಕೆಪಿಎಸ್‌ಸಿಯಲ್ಲಿ ಟಾಪರ್! ತನಿಖೆಯಲ್ಲಿ ಹೊರಬಂತು ಸ್ಫೋಟಕ ಸತ್ಯ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದ ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಸರಣಿ ರಾಜ್ಯದ ಯುವಜನತೆಯನ್ನು ಮತ್ತೆ ಬೆಚ್ಚಿಬೀಳಿಸಿದೆ. ಪದವಿ ಹಂತದಲ್ಲಿ ಐದು ವಿಷಯಗಳಲ್ಲಿ ಅನುತ್ತೀರ್ಣನಾಗಿದ್ದ ಅಭ್ಯರ್ಥಿಯೊಬ್ಬ ಲಕ್ಷಾಂತರ ರೂಪಾಯಿ ಲಂಚದ ಬಲೆಯಿಂದ ಕೆಪಿಎಸ್‌ಸಿ ಪರೀಕ್ಷೆಯಲ್ಲಿ ಟಾಪರ್ ಆಗಿ ಹೊರಹೊಮ್ಮಿರುವ ಸ್ಫೋಟಕ ಸತ್ಯ ತನಿಖೆಯಿಂದ ಬಹಿರಂಗಗೊಂಡಿದೆ.**




ಮಹಮದ್ ಸುಹೇಲ್ ಬಂಡೇಗೋಳ್ ಎಂಬ ಅಭ್ಯರ್ಥಿ ಡಿಗ್ರಿಯಲ್ಲಿ ಓದಲು ಹೆಣಗಾಡಿ ಹಲವು ವಿಷಯಗಳಲ್ಲಿ ಫೇಲ್ ಆಗಿ ನಂತರ ಹೇಗೋ ಪಾಸ್ ಮಾಡಿಕೊಂಡಿದ್ದಾನೆ. ಇದೀಗ ಹಣದ ಬಲದಿಂದ ಕೆಪಿಎಸ್‌ಸಿ ಪಟ್ಟಿಯಲ್ಲಿ ಅಗ್ರಸ್ಥಾನ ಪಡೆದಿರುವುದು ತನಿಖಾ ಸಂಸ್ಥೆಯ ಬಲೆಗೆ ಬಿದ್ದಿದೆ. ಈ ನೇಮಕಾತಿ ಅಕ್ರಮದಲ್ಲಿ ಒಟ್ಟು 40 ಲಕ್ಷ ರೂಪಾಯಿಗೆ ಡೀಲ್ ಕುದುರಿತ್ತು ಎನ್ನಲಾಗಿದೆ. ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಣೆಗೂ ಮುನ್ನವೇ ಅಭ್ಯರ್ಥಿಯು ಮುಂಗಡವಾಗಿ 20 ಲಕ್ಷ ರೂ. ನೀಡಿರುವುದು ಸಿಐಡಿ ವಿಚಾರಣೆ ವೇಳೆ ಬೆಳಕಿಗೆ ಬಂದಿದೆ. ತಾತ್ಕಾಲಿಕ ಪಟ್ಟಿ ಬಿಡುಗಡೆಯಾದ ಬಳಿಕ ಬಾಕಿ ಉಳಿದ 20 ಲಕ್ಷ ರೂಪಾಯಿಗಳನ್ನು ಪಾವತಿಸಲು ಒಪ್ಪಂದ ಮಾಡಿಕೊಳ್ಳಲಾಗಿತ್ತು ಎಂದು ಖುದ್ದು ಅಭ್ಯರ್ಥಿಯೇ ತನಿಖಾಧಿಕಾರಿಗಳ ಮುಂದೆ ಒಪ್ಪಿಕೊಂಡಿದ್ದಾನೆ. ಪರೀಕ್ಷಾ ವ್ಯವಸ್ಥೆಯಲ್ಲಿ ರಾಜೀ ಮಾಡಿಕೊಳ್ಳಲು ಕೆಲ ಪ್ರಭಾವಿ ವ್ಯಕ್ತಿಗಳು ಮತ್ತು ಮಧ್ಯವರ್ತಿಗಳು ಕೈಜೋಡಿಸಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. 70–80 ಲಕ್ಷದವರೆಗೆ ಬೇಡಿಕೆ: ಸುಮಾರು 400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ಅಕ್ರಮದ ಆರೋಪಗಳು ಜುಲೈನಲ್ಲಿ ಬಹಿರಂಗವಾಗಿದ್ದವು. ಅಭ್ಯರ್ಥಿಗಳಿಂದ ಮಧ್ಯವರ್ತಿಗಳು 70 ಲಕ್ಷದಿಂದ 80 ಲಕ್ಷದವರೆಗೆ ಹಣ ಕೇಳಿದ್ದಾರೆಂಬ ಆರೋಪಗಳು ಕೇಳಿಬಂದಿದ್ದವು. ಕೆಲವರು ಆಡಿಯೋ, ಫೋಟೋ ಹಾಗೂ ಇತರ ದಾಖಲೆಗಳನ್ನು ಪೊಲೀಸರಿಗೆ ನೀಡಿದ್ದರು. ಈ ಬೆಳವಣಿಗೆಯ ಬೆನ್ನಲ್ಲೇ ಪ್ರಕರಣಕ್ಕೆ ಸಂಬಂಧಿಸಿದ ಎಫ್‌ಐಆರ್‌ಗಳನ್ನು ಸಿಐಡಿಗೆ ವರ್ಗಾಯಿಸಲಾಯಿತು. ಪ್ರಶ್ನೆಪತ್ರಿಕೆ ಸೋರಿಕೆ, ಓಎಂಆರ್ ಉತ್ತರ ಪತ್ರಿಕೆಗಳಲ್ಲಿ ತಿರುಚಾಟ ಹಾಗೂ ಆಯ್ಕೆ ಪ್ರಕ್ರಿಯೆಯ ಮೇಲೆ ಪ್ರಭಾವ ಬೀರಿರುವ ಆರೋಪಗಳನ್ನು ತನಿಖೆ ಮಾಡಲಾಗುತ್ತಿದೆ.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಮಕ್ಕಳ ಹಕ್ಕು, ಸುರಕ್ಷತೆ ಕುರಿತು ಕಾನೂನು ಅರಿವು

ವಿಜಯ ದುಂಬಿ ಸುದ್ದಿ....

**ಕುಷ್ಟಗಿ: ಇನ್ನರ್ ವೀಲ್ ಕ್ಲಬ್ ಕುಷ್ಟಗಿ ವತಿಯಿಂದ ಕಂದಕೂರು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹೈಸ್ಕೂಲ್ ವಿದ್ಯಾರ್ಥಿಗಳಿಗಾಗಿ ಮಕ್ಕಳ ಹಕ್ಕುಗಳು ಹಾಗೂ ಸುರಕ್ಷತೆ ಕುರಿತು ಕಾನೂನು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.**

ಹಿರಿಯ ನ್ಯಾಯವಾದಿ ಚೈತ್ರ ವೀರೇಶ್ ಅವರು ಮಕ್ಕಳಿಗೆ ಶಿಕ್ಷಣದ ಹಕ್ಕು, ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕು, ಪಾಲಕರ ಜವಾಬ್ದಾರಿ, ಬಾಲ್ಯ ವಿವಾಹ ತಡೆ ಕಾಯಿದೆ, ಕಔಅಖಔ ಕಾಯಿದೆ, ಶಾಲೆಯಲ್ಲಿ ಲೈಂಗಿಕ ಕಿರುಕುಳದಿಂದ ರಕ್ಷಣೆ ಹಾಗೂ ಗುಡ್ ಟಚ್?ಬ್ಯಾಡ್ ಟಚ್ ಸೇರಿದಂತೆ ವಿವಿಧ ಕಾನೂನು ಮತ್ತು ಸುರಕ್ಷತಾ ವಿಷಯಗಳ ಕುರಿತು ಸರಳವಾಗಿ ಮಾಹಿತಿ ನೀಡಿದರು.



ಮಕ್ಕಳಿಂದ ನಡೆಯುವ ಕಾನೂನುಬಾಹಿರ ಕೃತ್ಯಗಳು ಹಾಗೂ ಬಾಲ ನ್ಯಾಯ ಕಾಯಿದೆಯಡಿ ಕೈಗೊಳ್ಳುವ ಕ್ರಮಗಳು, ತಪ್ಪು ಮಾಡಿದ ಮಕ್ಕಳಿಗೆ ನೀಡಲಾಗುವ ಸುಧಾರಣಾತ್ಮಕ ಕ್ರಮಗಳ ಬಗ್ಗೆಯೂ ವಿದ್ಯಾರ್ಥಿಗಳಿಗೆ ತಿಳಿಸಲಾಯಿತು.

ಕಾನೂನಿನ ಉದ್ದೇಶ ಕೇವಲ ಶಿಕ್ಷೆ ನೀಡುವುದಲ್ಲ, ಮಕ್ಕಳನ್ನು ತಪ್ಪು ದಾ–ರಿಗೆ ಹೋಗದಂತೆ ತಡೆಯುವುದು ಹಾಗೂ ಅವರ ಭವಿಷ್ಯವನ್ನು ಸುರಕ್ಷಿತಗೊಳಿಸುವುದಾಗಿದೆ ಎಂದು ತಿಳಿಸಿದರು. ಅನ್ಯಾಯ, ಕಿರುಕುಳ ಅಥವಾ ಅಸುರಕ್ಷಿತ ಪರಿಸ್ಥಿತಿ ಎದುರಾದಾಗ ಹೆದರದೆ, ಸೂಕ್ತ ವ್ಯಕ್ತಿಗಳ ಸಹಾಯ ಪಡೆದು ಧೈರ್ಯದಿಂದ ಪ್ರತಿಕ್ರಿಯಿಸುವಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಾಯಿತು.

=ಕಾರ್ಯಕ್ರಮದಲ್ಲಿ ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಗೌರಮ್ಮ ಕುಡತನಿ, ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ, ನಿಕಟ ಪೂರ್ವಾಧ್ಯಕ್ಷೆ ಗಿರಿಜಾ ಮಾಲಿ ಪಾಟೀಲ್, ಎಡಿಟರ್ ಶಾರದಾ ಶೆಟ್ಟರ್, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನೀಟ್ ಪ್ರತಿಭಟನಾಕಾರರ ವಿರುದ್ಧದ ಎಫ್‌ಐಆರ್ ರದ್ದು, ಸೆ. 5ರ ಪ್ರತಿಭಟನೆ ಹಿಂಪಡೆದ CJP

ವಿಜಯ ದುಂಬಿ ಸುದ್ದಿ....

**ನವದೆಹಲಿ: NEET-UG ಪ್ರತಿಭಟನೆಯ ಸಂದರ್ಭದಲ್ಲಿ ವಿದ್ಯಾರ್ಥಿ ಪ್ರತಿಭಟನಾಕಾರರ ವಿರುದ್ಧ ದಾಖಲಿಸಲಾದ ಈಋಖ ಕುರಿತು ಸುಪ್ರೀಂ ಕೋರ್ಟ್‌ನಲ್ಲಿ ನಡೆದ ಬೆಳವಣಿಗೆಗಳ ಹಿನ್ನೆಲೆಯಲ್ಲಿ, 'ಕಾಕ್ರೋಚ್ ಜನತಾ ಪಾರ್ಟಿ' (ಅಎಕ)ಯು ನವದೆಹಲಿಯಲ್ಲಿ ಸೆಪ್ಟೆಂಬರ್ 5 ರಂದು ನಡೆಸಲು ಉದ್ದೇಶಿಸಿದ್ದ ಪ್ರತಿಭಟನಾ ಮೆರವಣಿಗೆಯನ್ನು ರದ್ದುಗೊಳಿಸಿದೆ.**

ಇಂಡಿಯಾ ಗೇಟ್‌ನಿಂದ ದೆಹಲಿ ಪೊಲೀಸ್ ಪ್ರಧಾನ ಕಚೇರಿಯವರೆಗೆ ಪ್ರತಿಭಟನೆ ನಡೆಸುವ ತಮ್ಮ ನಿರ್ಧಾರವನ್ನು ಹಿಂಪಡೆದಿರುವುದಾಗಿ ಅಎಕ ಸಹ–ಸಂಂ–ಯೋಜಕ ಸೌರವ್ ದಾಸ್ ಅವರು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಪೀಠಕ್ಕೆ ತಿಳಿಸಿದರು. ಜುಲೈ 20 ಮತ್ತು ಜುಲೈ 25 ರ ನಡುವೆ ದೇಶದ ವಿವಿಧ ಭಾಗಗಳಲ್ಲಿ ನಡೆದ ಪ್ರತಿಭಟನೆಗಳಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳ ವಿರುದ್ಧ ದಾಖಲಾದ ಈಋಖಗಳನ್ನು ಮುಚ್ಚಲು ಮತ್ತು ರದ್ದುಗೊಳಿಸಲು ಅನುಕೂಲ ಮಾಡಿಕೊಡುವಂತೆ ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಸಾಲಿಸಿಟ–ರ್ ಜನರಲ್ ತುಷಾರ್ ಮೆಹ್ತಾ ಅವರು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ ನಂತರ ಈ ನಿರ್ಧಾರ ಹೊರಬಿದ್ದಿದೆ.



ದೆಹಲಿ, ಬಿಹಾರ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆಗಳಿಗೆ ಸಂಬಂಧಿಸಿದ ಹಲವಾರು ಈಋಖಗಳನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿತು. ಆದಾಗ್ಯೂ, ಗಂಭೀರ ಅಪರಾಧ ಕೃತ್ಯಗಳ ಆರೋಪಗಳನ್ನು ಒಳಗೊಂಡ ಪ್ರಕರಣಗಳಲ್ಲಿ ಸಾಮಾನ್ಯ ಕಾನೂನು ಪ್ರಕ್ರಿಯೆಯು ಮುಂದುವ–ರಿಯಲು ನ್ಯಾಯಾಲಯ ಅವಕಾಶ ನೀಡಿತು.

CJP ಪ್ರತಿನಿಧಿಗಳಿಗೆ ಈ ಹಿಂದೆ ನೀಡಿದ್ದ ಭರವಸೆಗಳನ್ನು ಈಡೇರಿಸುವುದಾಗಿ ಸರ್ಕಾರ ನೀಡಿದ ಭರವಸೆಗಳ ನಂತರ ಈ ಬೆಳವಣಿಗೆಗಳು ನಡೆದಿವೆ. ಈ ಭರವಸೆಗಳಲ್ಲಿ ಹಿಂದಿನ ಪ್ರತಿಭಟನೆಗಳ ಸಂದರ್ಭದಲ್ಲಿ ಸಂಕಷ್ಟಕ್ಕೀಡಾದ ಕುಟುಂಬಗಳಿಗೆ ಪರಿಹಾರ ಒದಗಿಸುವ ಕಾರ್ಯವಿಧಾನಗಳನ್ನು ರೂಪಿಸುವುದು ಸೇರಿದೆ. ಸರ್ಕಾರದ ಭರವಸೆಗಳು ಮತ್ತು ಈಋಖ ವಿಷಯದಲ್ಲಿ ನ್ಯಾಯಾಲಯದ ಮಧ್ಯಪ್ರವೇಶದ ನಂತರ, ಅಎಕ ತನ್ನ ಸೆಪ್ಟೆಂಬರ್ 5 ರ ಪ್ರತಿಭಟನಾ ಮೆರವಣಿಗೆಯನ್ನು ಹಿಂಪಡೆಯಲು ನಿರ್ಧರಿಸಿತು.

# ಪ್ರಧಾನಿ ಮೋದಿ ಹೆಸರಲ್ಲಿ ಸೇವಾ ಸಂಕಲ್ಪ ಕಾರ್ಯಕ್ರಮಕ್ಕೆ ಬಿಜೆಪಿ ಸಿದ್ಧತೆ

ವಿಜಯ ದುಂಬಿ ಸುದ್ದಿ....

**ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಜೀವನಕ್ಕೆ ಕಾಲಿಟ್ಟು 25 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಹೆಸರಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಬಿಜೆಪಿ ಸಿದ್ಧತೆ ನಡೆಸಿದೆ. ಅಭಿಯಾನದ ರೂಪುರೇಷೆ ಹಾಗೂ ಕಾರ್ಯಕ್ರಮಗಳ ಕು–ರಿತು ಚರ್ಚಿಸಲು ಇಂದು ನವದೆಹಲಿಯಲ್ಲಿ ಬಿಜೆಪಿ ಪ್ರಮುಖರ ಮಹತ್ವದ ಸಭೆ ನಡೆಯಲಿದೆ.**

ಬಿಜೆಪಿ ಹಾಗೂ ಎನ್‌ಡಿಎ ಆಡಳಿತದ ರಾಜ್ಯಗಳ ಆಯ್ದ ಮುಖ್ಯ



ಮಂತ್ರಿಗಳು ಮತ್ತು ಸಚಿವರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರ ನಿವಾಸದಲ್ಲಿ ನಡೆಯಲಿರುವ ತರಬೇತಿ ಕಾರ್ಯಾಗಾರದಲ್ಲಿ ದೇಶಾದ್ಯಂತ ಬಿಜೆಪಿ ಆಡಳಿತದಲ್ಲಿರುವ ರಾಜ್ಯಗಳ ಸುಮಾರು 25 ಮುಖ್ಯಮಂತ್ರಿಗಳು ಹಾಗೂ ಸಚಿವರು ಭಾಗವಹಿಸುವ ನಿರೀಕ್ಷೆಯಿದೆ. ?ಲಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಪ್ರಮುಖ ಸಾಧನೆಗಳು ಹಾಗೂ ವಿವಿಧ ಜನಪರ ಯೋಜನೆಗಳನ್ನ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಈ ಕಾರ್ಯಾಗಾರದಲ್ಲಿ ತಂತ್ರಗಾರಿಕೆ ರೂಪಿಸಲಾಗುತ್ತದೆ.

ಅಭಿಯಾನವನ್ನ ಪರಿಣಾಮ ಕಾ–ರಿಯಾಗಿ ದೇಶಾದ್ಯಂತ ನಡೆಸುವ ಕು–ರಿತು ನಾಯಕರು ಚರ್ಚೆ ನಡೆಸಲಿದ್ದಾರೆ. ಇನ್ನೂ ಕಾರ್ಯಾಗಾರ ಮುಗಿದ ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರನ್ನು ಬಿಜೆಪಿ ನಾಯಕರು ಭೇಟಿಯಾಗುವ ಸಾಧ್ಯತೆಯೂ ಇದೆ. ಮೋದಿ ಅವರ ಸಾರ್ವಜನಿಕ ಜೀವನದ 25ನೇ ವರ್ಷದ ಸಂಭ್ರಮಾಚರಣೆಯ ಅಂಗವಾಗಿ ಮುಂದಿನ 1 ತಿಂಗಳ ಅವಧಿಯಲ್ಲಿ ಒಟ್ಟು 17 ಕಾರ್ಯಕ್ರಮಗಳನ್ನು ಆಯೋಜಿಸಲು ಬಿಜೆಪಿ ಸಿದ್ಧತೆ ನಡೆಸಿದೆ. ಸೇವೆ, ಅಭಿವೃದ್ಧಿ ಹಾಗೂ ಸರ್ಕಾರದ ಸಾಧನೆಗಳನ್ನು ಜನರಿಗೆ ತಲುಪಿಸುವುದೇ ಈ ಕಾರ್ಯಕ್ರಮಗಳ ಪ್ರಮುಖ ಉದ್ದೇಶವಾಗಿದೆ.

# ಡಿಸೆಂಬರ್ ವೇಳೆಗೆ ಬಾಂಗ್ಲಾಕ್ಕೆ ಮರಳುವೆ: ಶೇಖ್ ಹಸೀನಾ

ವಿಜಯ ದುಂಬಿ ಸುದ್ದಿ....

**ನವದೆಹಲಿ/ಢಾಕಾ: ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರು ಪ್ರಸಕ್ತ ವರ್ಷದ ಡಿಸೆಂಬರ್ ವೇಳೆಗೆ ತಮ ಮಾತೃದೇಶಕ್ಕೆ ಮರಳುವ ದೃಢ ನಿರ್ಧಾರವನ್ನು ಪ್ರಕಟಿಸಿದ್ದಾರೆ. ವಿಶೇಷ ಸಂದರ್ಶನದಲ್ಲಿ ಈ ವಿಚಾರ ತಿಳಿಸಿರುವ ಅವರು, ತಮ ಹಸ್ತಾಂತರದ ಕುರಿತಾದ ಬಾಂಗ್ಲಾದೇಶ ಸರ್ಕಾರದ ಬೇಡಿಕೆಗಳನ್ನು ತಳ್ಳಿಹಾಕಿದ್ದಾರೆ. ಅನಿರ್ದಿಷ್ಟಾವಧಿ ಕಾಲ ವಿದೇಶದಲ್ಲೇ ಉಳಿಯುವ ಉದ್ದೇಶವಿಲ್ಲ, ಜನರೊಂದಿಗೆ ನಿಲ್ಲಲು ಡಿಸೆಂಬರ್ ವೇಳೆಗೆ ದೇಶಕ್ಕೆ ವಾಪಸಾಗುವುದಾಗಿ ಸ್ಪಷ್ಟಪಡಿಸಿದ್ದಾರೆ.**

ರಾಜಕೀಯ ಉದ್ದೇಶಗಳಿಗಾಗಿ ತಮ ಹಸ್ತಾಂತರದ ವಿಷಯವನ್ನು ಬಳಸಿಕೊಳ್ಳಲಾಗುತ್ತಿದ್ದು, ಕಾನೂನು ಹಾಗೂ ರಾಜ–ತಾಂತ್ರಿಕ ಪ್ರಕ್ರಿಯೆಗಳು ನಡೆಯಲಿ ಎಂದಿದ್ದಾರೆ. ತಮ ಆಡಳಿತಾವಧಿಯಲ್ಲಿ ಜಿಡಿಪಿ ಹಾಗೂ ತಲಾ ಆದಾಯ ಗಣನೀಯವಾಗಿ ಹೆಚ್ಚಿದೆ. ಆದರೆ ಪ್ರಸ್ತುತ ಬಿಎನ್‌ಪಿ ಸರ್ಕಾರದ ಆಡಳಿತದಲ್ಲಿ ಜಿಡಿಪಿ ಬೆಳವಣಿಗೆ ಕುಸಿದಿದ್ದು ಬಡತನ ಮತ್ತು ನಿರುದ್ಯೋಗ ಹೆಚ್ಚಾಗಿದೆ ಎಂದು ಆರೋಪಿಸಿದ್ದಾರೆ. ದೇಶದಲ್ಲಿ ತೀವ್ರ ಆರ್ಥಿಕ ಮುಗ್ಗಟ್ಟು ಮತ್ತು ಅನಿಲ ಕೊರತೆ ಇರುವಾಗ 2.3 ಬಿಲಿಯನ್ ವೆಚ್ಚದಲ್ಲಿ ಚೀನಾದ ಎ–10ಸಿಇ ಯುದ್ಧ ಜೆಟ್‌ಗಳನ್ನು ಖರೀದಿಸುತ್ತಿರುವ ಸರ್ಕಾರದ ಕ್ರಮವನ್ನು ಪ್ರಶ್ನಿಸಿದ್ದಾರೆ. ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರು, ದೇವಾಲಯಗಳು ಹಾಗೂ ಸಾಂಸ್ಕೃತಿ–ಕ ಕೇಂದ್ರಗಳ ಮೇಲಿನ ದಾಳಿಗಳು ಹೆಚ್ಚುತ್ತಿದ್ದು, ದೇಶವು ಮತ್ತೊಂದು ಪಾಕಿಸ್ತಾನವಾಗುವ ಅಪಾಯವಿದೆ ಎಂಬ ಕಳವಳ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಬಾಂಗ್ಲಾದೇಶದಲ್ಲಿ ಅಮೆ–ರಿಕ ಹಾಗೂ ಇತರ ರಾಜತಾಂತ್ರಿಕ ಬೆಳವಣಿಗೆಗಳ ನಡುವೆ, ಶೇಖ್ ಹಸೀನಾ ಅವರ ಈ ವಾಪಸಾತಿ ಘೋಷಣೆಯು ದಕ್ಷಿಣ ಏಷ್ಯಾದ ರಾಜಕೀಯ ವಲಯದಲ್ಲಿ ಹೊಸ ಸಂಚಲನ ಸೃಷ್ಟಿಸಿದೆ.



ಸರ್ಕಾರಿ ಉದ್ಯೋಗಗಳ ಮೀಸಲಾತಿ ವಿರುದ್ಧ ಆರಂಭವಾದ ವಿದ್ಯಾರ್ಥಿ ಚಳವಳಿಯು ಕ್ರಮೇಣ ಸರ್ಕಾರ ವಿರೋಧಿ ಆಂದೋಲನವಾಗಿ ಪರಿವರ್ತನೆಯಾಗಿತ್ತು. ಹಿಂಸಾಚಾರ ತೀವ್ರಗೊಂಡ ಹಿನ್ನೆಲೆಯಲ್ಲಿ 2024ರ ಆಗಸ್ಟ್ 5ರಂದು ಶೇಖ್ ಹಸೀನಾ ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿ ದೇಶ ತೊರೆದು ಭಾರತಕ್ಕೆ ಬಂದಿದ್ದರು. ಅವರ ಸುಮಾರು 15 ವರ್ಷಗಳ ಎರಡನೇ ಹಂತದ ಆಡಳಿತ ಅಲ್ಲಿಗೆ ಅಂತ್ಯಗೊಂಡಿತು. ನಂತರ ನೊಬೆಲ್ ಪ್ರಶಸ್ತಿ ಪುರಸ್ಕೃತ ಮುಹಮದ್ ಯೂನುಸ್ ನೇತೃತ್ವದಲ್ಲಿ ಮಧ್ಯಂತರ ಸರ್ಕಾರ ರಚನೆಯಾಯಿತು.

ಸಂಘರ್ಷದಲ್ಲಿ ಸಾವಿನ ಸಂಖ್ಯೆ ಕುರಿತು ವಿವಿಧ ಹಂತಗಳಲ್ಲಿ ಬೇರೆಬೇರೆ ಅಂಕಿಅಂಶಗಳು ಹೊರಬಂದವು. ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಕಚೇರಿ ನಂತರದ ಪರಿಶೀಲನೆಯಲ್ಲಿ 2024ರ ಜುಲೈ–ಆಗಸ್ಟ್ ಹಿಂಸಾಚಾರದಲ್ಲಿ ಸುಮಾರು 1,400 ಮಂದಿ ಸಾವನ್ನಪ್ಪಿರಬಹುದೆಂದು ಅಂದಾಜಿಸಿತ್ತು. ಹೀಗಾಗಿ ಹಸೀನಾ ಅವರ ಪತನ ಕೇವಲ ರಾಜಕೀಯ ಅಧಿಕಾರ ಬದಲಾವಣೆ ಮಾತ್ರವಲ್ಲದೆ ಗಂಭೀರ ಮಾನವ ಹಕ್ಕುಗಳ ವಿವಾದಕ್ಕೂ ಕಾರಣವಾಯಿತು. ಅವಾಮಿ ಲೀಗ್‌ಗೆ ನಿರ್ಬಂಧ ಹಸೀನಾ ಭಾರತದಲ್ಲಿರುವ ಅವಧಿಯಲ್ಲಿ ಅವರ ಅವಾಮಿ ಲೀಗ್ ಪಕ್ಷವೂ ಬಾಂಗ್ಲಾದೇಶದಲ್ಲಿ ದೊಡ್ಡ ಹೊಡೆತ ಅನುಭವಿಸಿತು. 2025ರ ಮೇನಲ್ಲಿ ಮಧ್ಯಂತರ ಸರ್ಕಾರವು ರಾಷ್ಟ್ರೀಯ ಭದ್ರತೆಯ ಕಾರಣವನ್ನು ಉಲ್ಲೇಖಿಸಿ ಅವಾಮಿ ಲೀಗ್‌ನ ಚಟುವಟಿಕೆಗಳನ್ನು ಭಯೋತ್ಪಾದನೆ ವಿರೋಧಿ ಕಾನೂನಿನಡಿ ನಿಷೇಧಿಸಿತು. ನಂತರ ಚುನಾವಣಾ ಆಯೋಗವೂ ಪಕ್ಷದ ನೋಂದಣಿಯನ್ನು ಅಮಾನತುಗೊಳಿಸಿತು. ಪರಿಣಾಮ ಮುಂದಿನ ಚುನಾವಣೆಯಲ್ಲಿ ಪಕ್ಷ ಸ್ಪರ್ಧಿಸುವ ಸಾಧ್ಯತೆ ಗಂಭೀರವಾಗಿ ಕುಂಠಿತವಾಯಿತು.

ಇದನ್ನೇ ಹಸೀನಾ ಈಗ ಪ್ರಶ್ನಿಸುತ್ತಿದ್ದಾರೆ. ಅವರ ವಾದದ ಪ್ರಕಾರ, ಅವಾಮಿ ಲೀಗ್‌ನ ಭವಿಷ್ಯವನ್ನು ನಿಷೇಧದ ಮೂಲಕ ನಿರ್ಧ–ರಿಸುವ ಬದಲು ಚುನಾವಣೆಯಲ್ಲಿ ಜನರೇ ತೀರ್ಮಾನಿಸಬೇಕು. ಪಕ್ಷವು ತನ್ನ ಐತಿಹಾಸಿಕ ಪಾತ್ರವನ್ನು ಹೊಂದಿದೆ ಮತ್ತು ರಾಜಕೀಯವಾಗಿ ಅದನ್ನು ಸಂಪೂರ್ಣವಾಗಿ ಅಳಿಸಲು ಸಾಧ್ಯವಿಲ್ಲ ಎಂಬುದು ಅವರ ನಿಲುವು. ಆದರೆ ಬಾಂಗ್ಲಾದೇಶದ ಪ್ರಸ್ತುತ ರಾಜಕೀಯ ವ್ಯವಸ್ಥೆಯಲ್ಲಿ ಅವಾಮಿ ಲೀಗ್‌ನ ವಿರುದ್ಧದ ಪ್ರಕರಣಗಳು, 2024ರ ಹಿಂಸಾಚಾರದ ಹೊಣೆಗಾರಿಕೆ ಮತ್ತು ಪಕ್ಷದ ನಾಯಕತ್ವದ ಮೇಲಿನ ಕಾನೂನು ಕ್ರಮಗಳು ಈ ಪ್ರಶ್ನೆಯನ್ನು ಅತ್ಯಂತ ಸಂಕೀರ್ಣಗೊಳಿಸಿವೆ.

# ನಡುರಸ್ತೆಯಲ್ಲೇ ರ್ಯಾಪಿಡೋ ಬೈಕ್ ಸವಾರನ ಮೇಲೆ ಆಟೋ ಚಾಲಕರಿಂದ ಹಲ್ಲೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ನಡುರಸ್ತೆಯಲ್ಲೇ ರ್ಯಾಪಿಡೋ ಬೈಕ್ ಸವಾರನ ಮೇಲೆ ಆಟೋ ಚಾಲಕರು ಹಿಗ್ಗಾಮುಗ್ಗಾ ಹಲ್ಲೆ ನಡೆಸಿ ದರ್ಪ ಮೆರೆದಿರುವ ಅಮಾನವೀಯ ಘಟನೆ ನಗರದಲ್ಲಿ ನಡೆದಿದೆ. ಬೆಂಗಳೂರು–ಹೊಸೂರು ಹೆದ್ದಾರಿಯ ಎಲೆಕ್ಟ್ರಾನಿಕ್‌ಸಿಟಿಯಲ್ಲಿರುವ ಸೀಸನ್?ಸ ಹೋಟೆಲ್ ಸಮೀಪ ಗ್ರಾಹಕರೊಬ್ಬರು ರ್ಯಾಪಿಡೊ ಬುಕ್ ಮಾಡಿದ ಹಿನ್ನೆಲೆಯಲ್ಲಿ ರಸ್ತೆಬದಿ ಬೈಕ್ ನಿಲ್ಲಿಸಿಕೊಂಡು ಗ್ರಾಹಕರಿಗಾಗಿ ಯುವಕ ಕಾಯುತ್ತಿದ್ದನು.**

ಆ ಸಂದರ್ಭದಲ್ಲಿ ಆಟೋ ಚಾಲಕನೊಬ್ಬ ಇವನ ಬಳಿ ಬಂದು ಬೈಕ್ ಸೈಡ್‌ಗೆ ಹಾಕು ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. ಅಲ್ಲದೆ, ನಡುರಸ್ತೆಯಲ್ಲೇ ಯುವಕನ ಮೇಲೆ ಮನಸೋ ಇಚ್ಛೆ ಹಲ್ಲೆ ನಡೆಸಿದ್ದಾನೆ. ಈ ವೇಳೆ ಇನ್ನಿಬ್ಬರು ಆಟೋ ಚಾಲಕರು ಸೇರಿಕೊಂಡು ಯುವಕನಿಗೆ ವಿನಾಕಾರಣ ಬೈದು ಹೊಡೆದಿದ್ದಾರೆ. ಸಾರ್ವಜನಿಕರು ನೋಡುತ್ತಿದ್ದರೂ ಸಹ ಬಿಡದೆ ಮನಸೋ ಇಚ್ಛೆ ಥಳಿಸಿರುವ ಮೂವರು ಆಟೋ ಚಾಲಕರ ವಿರುದ್ಧ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿದೆ. ಪೊಲೀಸರ ಭಯವಿಲ್ಲದೆ ಆಟೋ ಚಾಲಕರು ಸಾರ್ವಜನಿಕ ಸ್ಥಳದಲ್ಲಿ ಪುಂಡಾಟಿಕೆ ಮೆರೆದಿರುವುದು ರ್ಯಾಪಿಡೊ ಬೈಕ್ ಸವಾರರು ಹಾಗೂ ಸ್ಥಳೀಯರಲ್ಲಿ ಆತಂಕ ವ್ಯಕ್ತವಾಗಿದೆ.




### ಇಬ್ಬರು ವಾಹನಗಳ್ಳರ ಬಂಧನ:10.46 ಲಕ್ಷ ರೂ.ಮೌಲ್ಯದ 11 ದ್ವಿಚಕ್ರ ವಾಹನಗಳು, ಆಟೋ ಜಪ್ತಿ

ಬೆಂಗಳೂರು,ಸೆ.2– ನಗರದಲ್ಲಿ ಆಟೋರಿಕ್ಷಾ ಹಾಗೂ ದ್ವಿಚಕ್ರ ವಾಹನಗಳನ್ನು ಕಳವು ಮಾಡಿದ್ದ ಇಬ್ಬರನ್ನು ಶ್ರೀರಾಮಪುರ ಠಾಣೆ ಪೊಲೀಸರು ಬಂಧಿಸಿ 10.46 ಲಕ್ಷ ರೂ. ಮೌಲ್ಯದ 11 ದ್ವಿಚಕ್ರ ವಾಹನಗಳು ಹಾಗೂ ಆಟೋರಿಕ್ಷಾವನ್ನು ವಶಪಡಿಸಿಕೊಂಡಿದ್ದಾರೆ. ಮೂಲತಃ ಮಂಡ್ಯದ ಸುಪ್ರೀತ್ (26) ಮತ್ತು ರವಿ (24) ಬಂಧಿತ ವಾಹನಗಳ್ಳರು. ಶ್ರೀರಾಮಪುರ 2ನೇ ಕ್ರಾಸ್‌ನಲ್ಲಿರುವ ನಿವಾಸಿಯೊಬ್ಬರು ತಮ ಮನೆ ಮುಂಭಾಗ ಎಂದಿನಂತೆ ರಾತ್ರಿ ದ್ವಿಚಕ್ರ ವಾಹನ ನಿಲ್ಲಿಸಿದ್ದು, ಬೆಳಗಾಗುವಷ್ಟರಲ್ಲಿ ವಾಹನ ಇರಲಿಲ್ಲ. ಈ ಬಗ್ಗೆ ಅವರು ಪೊಲೀಸರಿಗೆ ದೂರು ನೀಡಿ ದ್ದರು.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಮಾಹಿತಿಗಳನ್ನು ಕಲೆ ಹಾಕಿದಾಗ ಒಬ್ಬಾತನನ್ನು ಮಂಡ್ಯ ಜಿಲ್ಲೆಯ ಹೊಸಹಳ್ಳಿಯಲ್ಲಿ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಮತ್ತೊಬ್ಬ ಸಹಚರನ ಜೊತೆ ಸೇರಿ ವಾಹನಗಳವು ಮಾಡಿರು ವುದಾಗಿ ಹೇಳಿದ್ದಾನೆ. ಈತನ ಮಾಹಿತಿಯಂತೆ ಮತ್ತೊಬ್ಬನನ್ನು ಮಂಡ್ಯದ ಬೀಚನಹಳ್ಳಿಯಲ್ಲಿ ಆತನ ಮನೆಯಲ್ಲೇ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಈ ಪ್ರಕರಣದಲ್ಲಿ ಭಾಗಿಯಾಗಿ ರುವುದಾಗಿ ಬಾಯ್ಬಿಟ್ಟಿದ್ದಾನೆ.

ಈ ಇಬ್ಬರೂ ಸೇರಿಕೊಂಡು ಬೆಂಗಳೂರು, ಮಂಡ್ಯ, ಮೈಸೂರು ಮತ್ತು ಕೋಲಾರದಲ್ಲಿ ಒಟ್ಟು 11 ದ್ವಿಚಕ್ರ ವಾಹನಗಳನ್ನು ಹಾಗೂ ಆಟೋ–ರಿಕ್ಷಾವನ್ನು ಕಳವು ಮಾಡಿ ಮಾರಾಟ ಮಾಡುವ ಸಲುವಾಗಿ ಮಂಡ್ಯದ ಶಿವಳ್ಳಿಯಲ್ಲಿರುವ ಹಳೆಯ ಆಲೆಮನೆ ಹಾಗೂ ನಗರದ ಪಿಎಫ್ ರಸ್ತೆಯಲ್ಲಿ ನಿಲ್ಲಿಸಿರುವುದಾಗಿ ವಿಚಾರಣೆ ವೇಳೆ ತಿಳಿದುಬಂದಿದೆ. ಆರೋಪಿಗಳ ಮಾಹಿತಿ ಯಂತೆ ಒಟ್ಟು 11 ದ್ವಿಚಕ್ರ ವಾಹನಗಳು ಹಾಗೂ ಒಂದು ಆಟೋರಿಕ್ಷಾವನ್ನು ವಶಪಡಿಸಿಕೊಳ್ಳಲಾಗಿದ್ದು, ಅವುಗಳ ಒಟ್ಟು ಮೌಲ್ಯ 11.46 ಲಕ್ಷ ರೂ.ಗಳೆಂದು ಅಂದಾಜಿಸಲಾಗಿದೆ. ಈ ಕಾರ್ಯಾಚರಣೆಯನ್ನು ಇನ್‌ಸ್ಪೆಕ್ಟರ್ ಪೂಣಚ್ಚ ಹಾಗೂ ಇತರೆ ಸಿಬ್ಬಂದಿ ತಂಡವು ಕೈಗೊಂಡಿತ್ತು.

### ಮೂವರು ದರೋಡೆಕೋರರ ಬಂಧನ

ಬೆಂಗಳೂರು,ಸೆ.2– ಫುಡ್ ಡೆಲಿವರಿ ಬಾಯ್ ಸೇ–ರಿದಂತೆ ಹಲವರನ್ನು ಅಡ್ಡಗಟ್ಟಿ ದರೋಡೆ ಮಾಡಿ ಪರಾರಿಯಾಗುತ್ತಿದ್ದ ಮೂವರು ದರೋಡೆಕೋರರನ್ನು ಸುಬ್ರಹ್ಮಣ್ಯಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಅವರಿಂದ ನಾಲ್ಕು ಮೊಬೈಲ್ ಫೋನ್‌ಗಳು ಹಾಗೂ ಕೃತ್ಯಕ್ಕೆ ಬಳಸಿದ ಒಂದು ದ್ವಿಚಕ್ರ ವಾಹನ ವನ್ನು ವಶಪಡಿಸಿಕೊಂಡಿದ್ದಾರೆ. ಇವುಗಳ ಒಟ್ಟು ಮೌಲ್ಯ 1.50 ಲಕ್ಷ ರೂ.ಗಳು ಎಂದು ಅಂದಾಜಿಸಲಾಗಿದೆ. ಬಂಗಾರಪೇಟೆ ನಿವಾಸಿಗಳಾದ ಶೇಖ್‌ಮಾಜಾ (25), ಸೈಯ್ಯದ್ ಅಫ್ರೀದ್ ಉಲ್ಲಾ (21) ಮತ್ತು ತಲಘಟ್ಟಪುರ ನಿವಾಸಿ ಮೊಹಮದ್ ಶಾದಿಕ್(25) ಬಂಧಿತ ದರೋಡೆಕೋರರು. ಕಳೆದ 26 ರಂದು ಮುಂಜಾನೆ 1.30ರ ಸಮಯದಲ್ಲಿ ಡೆಲಿವರಿ ಬಾಯ್ ಒಬ್ಬರು ಅಪಾರ್ಟ್‌ಮೆಂಟ್ ಒಂದಕ್ಕೆ ಫುಡ್ ಡೆಲಿವರಿ ಮಾಡಿ ವಾಪಸ್ಸು ಗುಬ್ಬಲಾಳ ಮುಖ್ಯರಸ್ತೆಯಲ್ಲಿರುವ ಸಿಂಗಾಪುರ ಗಾರ್ಡನ್ ರಸ್ತೆಯಲ್ಲಿ ಬೈಕ್‌ನಲ್ಲಿ ಹೋಗುತ್ತಿದ್ದರು. ಆಗ ಒಂದೇ ಬೈಕ್‌ನಲ್ಲಿ ಬಂದ ಮೂವರು ದರೋಡೆಕೋರರು ಅವರನ್ನು ಅಡ್ಡಗಟ್ಟಿ ಬೆದರಿಸಿ 4 ಸಾವಿರ ರೂ.ಗಳನ್ನು ಕಿತ್ತುಕೊಂಡು ಪರಾರಿಯಾಗಿದ್ದರು.

ಈ ಬಗ್ಗೆ ಫುಡ್ ಡೆಲಿವರಿ ಬಾಯ್ ಅವರು ಸುಬ್ರಹ್ಮಣ್ಯಪುರ ಠಾಣೆಗೆ ದೂರು ನೀಡಿದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡು ಖಚಿತ ಮಾಹಿತಿ ಮೇರೆಗೆ ಆವಲಹಳ್ಳಿಯ ಮನೆಯೊಂದರಲ್ಲಿ ಈ ಮೂವರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ದರೋಡೆ ಪ್ರಕರಣಗಳು ಬೆಳಕಿಗೆ ಬಂದಿವೆ. ಸುಬ್ರಹ್ಮಣ್ಯಪುರ, ಕೋಣನಕುಂಟೆ, ಜಯನಗರ, ಕುಮಾರಸ್ವಾಮಿಲೇಔಟ್ ಪೊಲೀಸ್ ಠಾಣೆಗಳಲ್ಲಿ ತಲಾ ಒಂದು ದರೋಡೆ ಪ್ರಕರಣಗಳು ಹಾಗೂ ತಲಘಟ್ಟಪುರ ಪೊಲೀಸ್ ಠಾಣೆಯಲ್ಲಿ ದ್ವಿಚಕ್ರ ವಾಹನ ಕಳವು ಪ್ರಕರಣವೂ ಸೇರಿದಂತೆ ಒಟ್ಟು 5 ಪ್ರಕರಣಗಳು ಪತ್ತೆಯಾಗಿವೆ. ಆರೋಪಿಗಳನ್ನು ಬಂಧಿಸುವಲ್ಲಿ ಇನ್?ಸಪೆಕ್ಟರ್ ಲಕ್ಷ್ಮಿಕಾಂತ್ ಮತ್ತವರ ಸಿಬ್ಬಂದಿ ಯಶಸ್ವಿ ಯಾಗಿದ್ದಾರೆ.

## ಅಪಾಯದ ಮಟ್ಟದಲ್ಲಿವೆ ನೇಪಾಳದ ಮೂರು ನದಿಗಳು

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ನಟ ದುನಿಯಾ ವಿಜಯ್ ಅವರ ಪುತ್ರ ಸಾಮ್ರಾಟ್ ವಿಜಯ್ ಕಾಲೇಜು ವಿದ್ಯಾರ್ಥಿಯೊಬ್ಬನನ್ನು ಅಪಹರಿಸಿ ಹಲ್ಲೆ ಮಾಡಿರುವ ಆರೋಪ ಕೇಳಿಬಂದಿದೆ. ನಗರದ ಪ್ರತಿಷ್ಠಿತ ಕಾಲೇಜೊಂದರಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮ್ರಾಟ್ ಸೋಮವಾರ ಸ್ನೇಹಿತರೊಂದಿಗೆ ಕಾರಿನಲ್ಲಿ ಹೋಗುವಾಗ ಅದೇ ಕಾಲೇಜಿನ ವಿದ್ಯಾರ್ಥಿ ಮನೀಶ್‌ಗೌಡ ಮತ್ತು ಆತನ ಸ್ನೇಹಿತರು ಮತ್ತೊಂದು ಕಾರಿನಲ್ಲಿ ಸಾಮ್ರಾಟ್ ಕಾರನ್ನು ಓವರ್‌ಟೇಕ್ ಮಾಡಿದ್ದಾರೆ. ಈ ವಿಚಾರವಾಗಿ ಇಬ್ಬರು ವಿದ್ಯಾರ್ಥಿಗಳ ಮಧ್ಯೆ ಜಗಳವಾಗಿದೆ.**



ಈ ಹಿನ್ನೆಲೆಯಲ್ಲಿ ಮನೀಶ್ ವಿರುದ್ಧ ಸಾಮ್ರಾಟ್ ಕೋಪಗೊಂಡಿದ್ದು, ನಿನ್ನೆ ಮಧ್ಯಾಹ್ನ ಮನೀಶ್ ಕಾಲೇಜಿನ ಆವರಣದಲ್ಲಿ ತನ್ನ ಬೈಕ್ ನಿಲ್ಲಿಸುತ್ತಿದ್ದ ವೇಳೆ ಅಲ್ಲಿಗೆ ಕಾ–ರಿನಲ್ಲಿ ಬಂದ ಸಾಮ್ರಾಟ್ ಮತ್ತು ಅವನ ಸ್ನೇಹಿತರು ಮನೀಶ್‌ನನ್ನು ಕಾರಿನಲ್ಲಿ ಅಪಹರಿಸಿಕೊಂಡು ಪಟ್ಟಣಗೆರೆಯ ಮುಖ್ಯರಸ್ತೆ ಕಡೆ ಹೋಗಿ ಚಲಿಸುತ್ತಿದ್ದ ಕಾರಿನಲ್ಲೇ ಹಲ್ಲೆ ಮಾಡಿ ನಡುರಸ್ತೆಯಲ್ಲೇ ಬಿಟ್ಟು ಪರಾರಿಯಾಗಿದ್ದಾರೆ. ಈ ಬಗ್ಗೆ ಮನೀಶ್ ಗೌಡ ಕೆಂಗೇರಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಈ ಬಗ್ಗೆ ಎನ್‌ಸಿಆರ್ ದಾಖಲಿಸಿಕೊಳ್ಳಲಾಗಿದೆ ಎಂದು ನೈಋತ್ಯ ವಿಭಾಗದ ಡಿಸಿಪಿ ಅನಿತಾ ಬಿ ಹದ್ದಣ್ಣನವರ್ ಅವರು ಈ ಸಂಜೆಗೆ ತಿಳಿಸಿದ್ದಾರೆ.

# ನಿಷ್ಠಾವಂತ ಪಿಎಸ್‌ಐ ಅರವಿಂದ್ ಅಂಗಡಿ ಬೀಳ್ಕೊಡುಗೆ ಸಮಾರಂಭ

ವಿಜಯ ದುಂಬಿ ಸುದ್ದಿ....

**ಆಲಮೇಲ: ಆಲಮೇಲದಲ್ಲಿ ಎರಡು ವರ್ಷ ಸೇವೆ ಸಲ್ಲಿಸಿರುವುದು ತೃಪ್ತಿ ತಂದಿದ್ದು, ಈ ಪ್ರದೇಶ ನಿಜಕ್ಕೂ ಮತೀಯ ಸಾಮರಸ್ಯ, ಕೋಮು ಸೌಹಾರ್ದತೆಯ ಪ್ರತೀಕ ವಾಗಿದೆ ಎಂದು ನಿರ್ಗಮಿತ ಪಿಎಸ್‌ಐ ಅರವಿಂದ ಅಂಗಡಿ ಅಭಿಪ್ರಾಯ ಪಟ್ಟರು.**

ಪಟ್ಟಣದ ಐ ಜೆ ರಾಯಲ್ ಫಂಕ್ಷನ್ ಹಾಲ್ ನಲ್ಲಿ ಜರುಗಿದ ವರ್ಗಾವಣೆಗೊಂಡ ಪಿಎಸ್‌ಐ ಮತ್ತು ಸಿಬ್ಬಂದಿಗಳ ಬೀಳ್ಕೊಡುವ ಮತ್ತು ನೂತನ ಪಿಎಸ್‌ಐ ರ ಸ್ವಾಗತ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಸಮಾರಂಭದಲ್ಲಿ ಆಲಮೇಲ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕಗೌಡ ಎಂ ಕೋಳಾರಿ ಅವರು ನಿರ್ಗಮಿತ ಪಿಎಸ್‌ಐ ಅರವಿಂದ್ ಅಂಗಡಿ ಅವರಿಗೆ 'ಆದರ್ಶ ಸೇವಾ ಪುರಸ್ಕಾರ' ಪ್ರದಾನ ಮಾಡಿ ಶುಭಕೋರಿದರು. ವೈದ್ಯ ಸಾಹಿತಿ ಡಾ ಸಮೀರ್ ಹಾದಿಮನಿ ಮಾತನಾಡಿ ದಕ್ಷ ಪೊಲೀಸ್ ಅಧಿಕಾರಿಗೆ ನಿಷ್ಠೆ,



ನಿರ್ಭೀತತೆ ಮತ್ತು ನ್ಯಾಯಪರತೆಗಳೇ ಆಭರಣವಾಗಿದ್ದು, ಪಿಎಸ್‌ಐ ಅರವಿಂದ್ ಅಂಗಡಿಯವರು ಕಾನೂನು ಸುವ್ಯವಸ್ಥೆ ಕಾಪಾಡುವುದರ ಜೊತೆಗೆ ಆಲಮೇಲ ಭಾಗದಲ್ಲಿ ಜರುಗುವ ವಿವಿಧ ಧರ್ಮ ಜಾತಿ ಸಮುದಾಯಗಳ, ಹಬ್ಬ ಜಾತ್ರೆ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಜನಾನುರಾಗಿದ್ದರು ಎಂದರು. ಅರ್ಬನ್ ಬ್ಯಾಂಕ್ ಅಧ್ಯಕ್ಷ ಶಿವಕುಮಾರ್ ಗುಂದಗಿ, ಯಶವಂತರಾಯಗೌಡ ರೂಗಿ, ಕಸಾಪ ಅಧ್ಯಕ್ಷ ಶಿವಶರಣ ಗುಂದಗಿ ಮಾತನಾಡಿದರು.

ವೇದಿಕೆ ಮೇಲೆ ಸಿಂದಗಿ ಸರ್ಕಲ್ ಇನ್ಸ್ಪೆಕ್ಟರ್ ಸುನಿಲ್ ಮೂಲಿಮನಿ, ಎಸ್‌ಐ ಕಾಡಪ್ಪ ಜಕ್ಕಣ್ಣವರ, ಅನಿಲ ಮುನವಳ್ಳಿ, ಎಸ್ ಕೆ ವಾಘಮೊರೆ ಉಪಸ್ಥಿತರಿದ್ದರು. ಪಟ್ಟಣ ಪಂಚಾಯತ್ ಅಧ್ಯಕ್ಷ ಉಮರ್ ಬಿಳವಾರ, ಮಾಜಿ ಜಿಪಂ ಸದಸ್ಯ ಶ್ರೀಮಂತ ನಾಗೂರ್, ಬಸವರಾಜ್ ತಾವರಗೇರೆ, ಅಯುಬ್ ದೇವರಮನಿ, ಸಿದ್ದಲಿಂಗ ಸುಬೇದಾರ್, ಜೈ ಭೀಮ್ ನಾಯ್ಕೋಡಿ, ಶಶಿ ನಾಯ್ಕೋಡಿ, ದಾವಲಪ್ಪ ಸೊನ್ನ, ಮಲ್ಲು ಬ್ಯಾಡಗಿಹಾಳ, ಮಲ್ಲು ಅಚಲೇರಿ, ಪ್ರಶಾಂತ ನಾಶಿ,ಬಸವರಾಜ್ ತೆಲ್ಲೂರ, ಶ್ರೀಶೈಲ ಪೂಜಾರಿ, ವಿವಿಧ ಕನ್ನಡಪರ ಮತ್ತು ದಲಿತ ಸಂಘಟನೆಯ ಪದಾಧಿಕಾ–ರಿಗಳು, ಪೊಲೀಸ್ ಠಾಣೆಯ ಸಿಬ್ಬಂದಿ, ಗ್ರಾಮಗಳ ಮುಖಂಡರು ಭಾಗವಹಿಸಿದ್ದರು.

## ನದಿಗಳಲ್ಲಿ ಕೊಚ್ಚಿಕೊಂಡು ಬರುತ್ತಿರುವ ಮೀನುಗಳನ್ನು ಸೇವಿಸದಂತೆ ಎಚ್ಚರಿಕೆ, ಆದರೂ ಬಿಡದ ಜನ

ವಿಜಯ ದುಂಬಿ ಸುದ್ದಿ....

**ಬಿಹಾರ: ನೇಪಾಳದಿಂದ ಹರಿದುಬಂದ ಪ್ರವಾಹದ ನೀರಿನೊಂದಿಗೆ ಬಿಹಾರದ ವಿವಿಧ ಭಾಗಗಳಿಗೆ ಕೊಚ್ಚಿ ಬರುತ್ತಿರುವ ಅಸಾಮಾನ್ಯವಾಗಿ ಕಾಣುವ ಮೀನುಗಳನ್ನು ತಿನ್ನುವುದನ್ನು, ಖರೀದಿಸುವುದನ್ನು ಅಥವಾ ಮಾರಾಟ ಮಾಡುವುದನ್ನು ತಪ್ಪಿಸುವಂತೆ ಬಿಹಾರ ಸರ್ಕಾರವು ಆರೋಗ್ಯ ಸಲಹೆ ಹೊರಡಿಸಿದೆ.**

ಅಂತಹ ಮೀನುಗಳನ್ನು ಸೇವಿಸಿದ ನಂತರ ಕೆಲವರು ಅಸ್ವಸ್ಥಗೊಂಡಿದ್ದಾರೆ ಎಂಬ ವರದಿಗಳ ಹಿನ್ನೆಲೆಯಲ್ಲಿ, ಹೈನುಗಾ–ರಿಕೆ, ಮೀನುಗಾರಿಕೆ ಮತ್ತು ಪಶು ಸಂಪನ್ಮೂಲ ಇಲಾಖೆಯ ಮೀನುಗಾರಿಕೆ ವಿಭಾಗವು ಸೋಮವಾರ ಈ ಸಲಹೆಯನ್ನು ನೀಡಿದೆ. ಪ್ರವಾಹದ ನೀರು ಕೆರೆಗಳು, ನದಿಗಳು, ಸರೋವರಗಳು ಮತ್ತು ಇತರ ಜಲಮೂಲಗಳಿಂದ ಮೀನುಗಳನ್ನು ಕೊಚ್ಚಿಕೊಂಡು ಹೋಗಿ ದೂರದ ಸ್ಥಳಗಳಿಗೆ ಸಾಗಿಸಬಲ್ಲದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಪ್ರಕ್ರಿಯೆಯಲ್ಲಿ, ಮೀನುಗಳು ಕಲುಷಿತ ಚರಂಡಿಗಳು, ಸತ್ತ ಪ್ರಾಣಿಗಳು ಮತ್ತು ಇತರ ಕಲುಷಿತ ವಸ್ತುಗಳ ಸಂಪರ್ಕಕ್ಕೆ ಬರಬಹುದು; ಇದರಿಂದಾಗಿ ಅವು ಬ್ಯಾಕ್ಟೀ–ರಿಯಾ, ವೈರಸ್ ಮತ್ತು ಶಿಲೀಂಧ್ರಗಳ (ಫಂಗೈ) ಸೋಂಕಿಗೆ ಒಳಗಾಗುವ ಅಪಾಯ ಹೆಚ್ಚುತ್ತದೆ.

ಸಂಬಂಧಪಟ್ಟ ಅಧಿಕಾರಿಗಳಿಂದ ಸರಿಯಾಗಿ ಗುರುತಿಸಲ್ಪಟ್ಟು ಮತ್ತು ಬಳಕೆಗೆ ಸುರಕ್ಷಿತವೆಂದು ದೃಢೀಕರಿಸಲ್ಪಡದ ಹೊರತು, ಅಪರಿಚಿತ ಮೀನುಗಳನ್ನು ಸೇವನೆಗೆ ಸುರಕ್ಷಿತವೆಂದು ಪರಿಗಣಿಸದಂತೆ ಇಲಾಖೆಯು ಸಾರ್ವಜನಿಕರಿಗೆ ಮನವಿ ಮಾಡಿದೆ. ಪ್ರವಾಹದ ನೀರಿನಿಂದ ನೇರವಾಗಿ ಹಿಡಿದ ಮೀನುಗಳನ್ನು ಸೇವಿಸದಂತೆ ಹಾಗೂ



ಗುರುತು ತಿಳಿಯದ ಬಗೆಯ ಮೀನುಗಳನ್ನು ಖರೀದಿಸಿ ಮಾರಾಟ ಮಾಡದಂತೆ ನಿವಾಸಿಗಳಿಗೆ ನಿರ್ದಿಷ್ಟವಾಗಿ ಸೂಚಿಸಲಾಗಿದೆ. ಅಂತಹ ಮೀನುಗಳನ್ನು ಸೇವಿಸಿದ ನಂತರ ವಾಂತಿ, ಅತಿಸಾರ, ಹೊಟ್ಟೆ ನೋವು, ತಲೆತಿರುಗುವಿಕೆ ಅಥವಾ ಉಸಿರಾಟದ ತೊಂದರೆಯಂತಹ ಲಕ್ಷಣಗಳು ಕಂಡುಬಂದರೆ, ತಕ್ಷಣವೇ ಹತ್ತಿರದ ಆರೋಗ್ಯ ಕೇಂದ್ರ ಅಥ–'ವಾ ಆಸ್ಪತ್ರೆಯಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಲಾಗಿದೆ.

ಅಲ್ಲದೆ, ಅಸಾಮಾನ್ಯ ಬಗೆಯ ಮೀನುಗಳು ಕಂಡುಬಂದಲ್ಲಿ ಆ ಬಗ್ಗೆ ತಮ್ಮ ಜಿಲ್ಲಾ ಮೀನುಗಾರಿಕಾ ಅಧಿಕಾರಿ ಅಥವಾ ಸ್ಥಳೀಯ ಆಡಳಿತಕ್ಕೆ ಮಾಹಿತಿ ನೀಡುವಂತೆಯೂ ನಿವಾಸಿಗಳಿಗೆ ಸೂಚಿಸಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ವದಂತಿಗಳನ್ನು ನಂಬದಂತೆ ಮತ್ತು ಸುರಕ್ಷತೆಗೆ ಆದ್ಯತೆ ನೀಡುವಂತೆ ಇಲಾಖೆಯು ಸಾರ್ವಜನಿಕರನ್ನು ಕೋರಿದೆ.

## 4744 ಸರ್ಕಾರಿ ಹುದ್ದೆ ನೇಮಕಕ್ಕೆ ಸದ್ಯದಲ್ಲೇ ಅಧಿಸೂಚನೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಪದವಿ ಹಾಗೂ ಪಿಯುಸಿ– ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಒಟ್ಟು 4,744 ಹುದ್ದೆಗಳ ನೇಮಕಾತಿಗೆ ಇದೇ ತಿಂಗಳಲ್ಲಿಯೇ ಅಧಿಸೂಚನೆ ಹೊರಡಿಸಲಾಗುವುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಅವರು ತಿಳಿಸಿದ್ದಾರೆ.**




ಈ ಹುದ್ದೆಗಳಿಗೆ ನವೆಂಬರ್ ಹಾಗೂ ಡಿಸೆಂಬರ್ ತಿಂಗಳಲ್ಲಿ ಲಿಖಿತ ಪರೀಕ್ಷೆ ನಡೆಸಲು ಸಿದ್ಧತೆ ನಡೆಸಲಾಗಿದೆ. ಯಾವ ಇಲಾಖೆಯ ಯಾವ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು ಎಂಬುದರ ವಿವರಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಪಠ್ಯಕ್ರಮದ ವಿವರಗಳನ್ನು ನೀಡಲಾಗಿದೆ. ಒಮೆ ನೋಡಿಕೊಂಡು ಅಧ್ಯಯನ ಆರಂಭಿಸಿ. ಪದವಿ ಮಟ್ಟದ ತಾಂತ್ರಿಕೇತರ ಹುದ್ದೆಗಳು 2,421 ಹಾಗೂ ಪಿಯುಸಿ ಮಟ್ಟದ ತಾಂತ್ರಿಕೇತರ ಹುದ್ದೆಗಳು 2,062 ಇವೆ. ತಾಂತ್ರಿಕ ಹುದ್ದೆಗಳು 261 ಇದ್ದು, ನಂತರದ ದಿನಗಳಲ್ಲಿ ಇನ್ನೂ ಹೊಸ ಇಲಾಖೆ ಮತ್ತು ಹುದ್ದೆಗಳು ಸೇರುವ ಸಾಧ್ಯತೆ ಇದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಮಹಿಳಾ ಉದ್ಯಮಿಗಳ ಪ್ರೋತ್ಸಾಹಕ್ಕೆ ಸರ್ಕಾರ ಬದ್ಧ : ಸಿಎಂ ಡಿಕೆಶಿ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಮಹಿಳಾ ಸಬಲೀಕರಣಕ್ಕೆ ತಮ್ಮ ಸರ್ಕಾರ ಬದ್ಧತೆ ಹೊಂದಿದ್ದು, ಯಾವುದೇ ಸಮಸ್ಯೆಗಳಿದ್ದರೂ ಚರ್ಚೆಗೆ ಮುಕ್ತ ಅವಕಾಶ ಕಲ್ಪಿಸುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ. ನಗರದ ಎಫ್‌ಕೆಸಿಸಿಐ ಸಭಾಂಗಣದಲ್ಲಿ ಮಹಿಳಾ ಉದ್ಯಮಿಗಳ ಸಂಸ್ಥೆ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ಉದ್ದಿಮೆದಾರರ ದಿನಾಚರಣೆಯಲ್ಲಿ ಜೊತೆಯಾಗಿ ಬೆಳೆಯೋಣ ಸಮಾವೇಶ ಉದ್ದೇಶಿಸಿ ಅವರು ಮಾತನಾಡಿದರು.**

ಮಹಿಳೆಯರು ಅಡುಗೆ ಮನೆ ಮತ್ತು ಕುಟುಂಬ ನಿರ್ವಹಣೆಗಷ್ಟೆ ಸೀಮಿತವಾಗಬಾರದು. ಈ ದೇಶದ ಸಮಗ್ರ ಅಭಿವೃದ್ಧಿಗೆ ಮಹಿಳೆಯರು ಮತ್ತು ಯುವಕರ ಪಾತ್ರ ಮಹತ್ವದ್ದಾಗಿದೆ ಎಂದರು. 100 ಚಪ್ಪಲಿ ಏಟುಗಳನ್ನು ಪಟ?ಪಟ? ಎಂದು ತಿನ್ನಬಹುದು. ಆದರೆ ದುಡ್ಡಿನ ಏಟನ್ನು ತಿನ್ನಲಾಗುವುದಿಲ್ಲ ಎಂದು ತಮ್ಮ ತಾಯಿಯ ಸಹೋದರ ಹೇಳುತ್ತಿದ್ದರು. ಉದ್ಯಮಿಗಳಿಗೆ ಬ್ಯಾಂಕ್ ಸಾಲದ ಒತ್ತಡ, ವಿವಿಧ ಸರಕುಗಳನ್ನು ಪೂರೈಸಿದವರ ಬಾಕಿ ಮನ್ನಾ ಸೇರಿದಂತೆ ಹಲವಾರು ಸಮಸ್ಯೆಗಳು ಎದುರಾಗುತ್ತವೆ. ಆ ಒತ್ತಡವನ್ನು ನಿಭಾಯಿಸುವುದು ತ್ರಾಸದಾಯಕ ಎಂದರು.

ಇಂದಿನ ಸಮಾವೇಶದಲ್ಲಿ 70ಕ್ಕೂ ಹೆಚ್ಚಿನ



ವಿವಿಧ ಸಂಸ್ಥೆಗಳಿಂದ ಸುಮಾರು 3 ಸಾವಿರಕ್ಕೂ ಹೆಚ್ಚು ಸದಸ್ಯರು ಭಾಗವಹಿಸಿದ್ದಾರೆ. ಇದು ಕೇವಲ ಸಮಾವೇಶವಲ್ಲ, ಸಾವಿರಾರು ಕನಸುಗಳ ವೇದಿಕೆ ಎಂದು ಬಣ್ಣಿಸಿದರು. ಮಹಿಳೆಯರಿಗೆ ಅಗಾಧವಾದ ಸಾಮರ್ಥ್ಯವಿದೆ ಎಂದು ಹೇಳಿದ ಡಿ.ಕೆ.ಶಿವಕುಮಾರ್, ತಮ ಪತ್ನಿ ಹಾಗೂ ಪುತ್ರಿಯ ಕಾರ್ಯ ವೈಖ–ರಿಯನ್ನು ಕೊಂಡಾಡಿದರು. ಹೆಣ್ಣು ತಾಯಿಯಾಗಿ, ಮಡದಿಯಾಗಿ, ಪುತ್ರಿಯಾಗಿ, ಶಿಕ್ಷಕಿಯಾಗಿ ನಾನಾ ಪಾತ್ರಗಳನ್ನು ನಿಭಾಯಿಸುತ್ತಾರೆ. ನಮ ಸಂಸ್ಕೃತಿಯಲ್ಲಿ ಹೆಣ್ಣಿಗೆ ಮಹತ್ವದ ಪಾತ್ರ ಇದೆ ಎಂದು ಹೇಳಿದರು. ಭಾರತದ ಪ್ರಾಚೀನ ಗ್ರಂಥದಲ್ಲಿ ಸೀತೆ ರಾಮನಿಗಿಂತಲೂ ಹೆಚ್ಚಿನ ನೈತಿಕತೆ ಮತ್ತು ಸಾಮರ್ಥ್ಯ ಹೊಂದಿದ್ದರು. ಈ ಬಗ್ಗೆ ನಾನು ಬಹಿರಂಗ ಚರ್ಚೆಗೆ ಸಿದ್ಧನಿದ್ದೇನೆ ಎಂದು ಮುಖ್ಯಮಂತ್ರಿ ಹೇಳಿದರು. ಗಣೇಶ ಹಬ್ಬಕ್ಕಿಂತ ಮೊದಲು ಗೌರಿ ಹಬ್ಬ ಬರುತ್ತದೆ. ಪಾರ್ವತಿ ಪರಮೇಶ್ವರ ಸೇ–ರಿದಂತೆ ಹಲವಾರು ಸಂದರ್ಭಗಳನ್ನು ಇದೇ ವೇಳೆ ಮುಖ್ಯಮಂತ್ರಿ ಸರಿಸಿಕೊಂಡರು.

ಮಹಿಳಾ ಶಕ್ತಿಯನ್ನು ಅಂ–ದಾಜಿಸಿಯೇ ತಾವು ಗೃಹಲಕ್ಷ್ಮಿ, ಶಕ್ತಿಯಂತಹ ಮಹತ್ವದ ಯೋಜನೆಗಳನ್ನು ಘೋಷಿಸಿರುವುದಾಗಿ ಮುಖ್ಯಮಂತ್ರಿ ಹೇಳಿದರು. ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದಾಗ ಪ್ರಧಾನಮಂತ್ರಿ ಸೇರಿದಂತೆ ಬಿಜೆಪಿಯವರು ಟೀಕೆ ಮಾಡಿದ್ದರು. ಆದರೆ, ಅವುಗಳು ಇಂದು ರಾಜ್ಯದಲ್ಲಿ ಮಹಿಳೆಯರ ಸಬಲೀಕರಣದಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದು ವಿವರಿಸಿದರು. ಬೆಂಗಳೂರಿನಲ್ಲಿ ಸುರಂಗ ರಸ್ತೆ ಯೋಜನೆಗೆ ಕೆಲವು ಮೂರ್ಖ ನಾಯಕರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಅಂತಹವರಿಗೆ ಮಹಿಳಾ ಉದ್ಯಮಿಗಳು ಬಾಯಿಬಿಟ್ಟು ಮಾತನಾಡುವ ಮೂಲಕ ತಕ್ಕ ಉತ್ತರ ನೀಡಬೇಕು ಎಂದರು.

ಬೆಂಗಳೂರು ಬೃಹದಾಕಾರವಾಗಿ ಬೆಳೆದಿದೆ. ಸಂಚಾರ ದಟ್ಟಣೆ ವ್ಯಾಪಕವಾಗಿದೆ. ರಸ್ತೆಗಳನ್ನು ಅಗಲೀಕರಣ ಮಾಡಲು ಆಸ್ತಿ–ಪಾಸ್ತಿಗಳನ್ನು ಹೊಡೆಯಲು ಸಾಧ್ಯವಿಲ್ಲ. ಇಂತಹ ಸಂದರ್ಭದಲ್ಲಿ ಸುರಂಗ ರಸ್ತೆ ಯೋಜನೆ ಬಹು ಮುಖ್ಯವಾಗಿದೆ. ಆದರೆ ಅದನ್ನು ಕೆಲವರು ವಿರೋಧಿಸುತ್ತಿದ್ದಾರೆ ಎಂದು ಕಿಡಿಕಾರಿದರು. ಮಹಿಳಾ ಉದ್ಯಮಿದಾರರ ಅಧ್ಯಕ್ಷೆ ರತ್ನಪ್ರಭಾ ಸೇರಿದಂತೆ ಮಹಿಳಾ ಉದ್ಯಮಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

VIJYA DUMBI KANNADA DAILY EDITED,PUBLISHED AND OWNED BY,VIJYA PRiNTED AT MANJESHA,U#74,4TH,MAIN,7TH,CROSS,NEARCHOWDESHARI TEMPALE KAVERINAGARA,MAHADEVAPURA,POST BANGALORU KARNATAKAPUBLISHED Hosapalya Byrasandra Modalakote Po , Nelamangala to bengaluru rurala Karnataka 562123 EDITOR VIJYA